
ಜನಮನದ ದನಿ

# ಪ್ರಜೋದಯ

ಸಂಪಾದಕ : ಜೆ.ಆರ್. ಕೆಂಚೇಗೌಡ




ಪ್ರಧಾನಿ ಮೋದಿ ಅವರಿಗೆ ಇಥಿಯೋಪಿಯಾದ ಅತ್ಯುನ್ನತ ನಾಗರಿಕ ಪ್ರಶಸ್ತಿಯಾದ ದಿ ಗ್ರೇಟ್ ಆನರ್ ನಿಶಾನ್ ಆಫ್ ಇಥಿಯೋಪಿಯಾ ಪ್ರಶಸ್ತಿಯನ್ನು ಅಲ್ಲಿನ ಪ್ರಧಾನಿ ಅಬಿ ಅಹ್ಮದ್ ಅಲಿ ಪ್ರದಾನ ಮಾಡಿದರು.

18 ಡಿಸೆಂಬರ್ 2025 ಗುರುವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ : 276 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629



ಮಾತು ಮೌನ : ನಮ್ಮ ಅಸ್ತಿತ್ವದ ಪ್ರಬಲ ಸಾಧನಗಳು » 2



ಹದಗೆಟ್ಟ ಹಾನುಬಾಳು ರಸ್ತೆ : ಸಂಚಾರ ದುಸ್ತರ » 3



ಬಿಜೆಪಿ ತಪ್ಪು ಮರೆಮಾಚಲು ಸುಳ್ಳು ಪ್ರಕರಣ ದಾಖಲು » 4

# ವಿಧಾನಸಭೆಯಲ್ಲಿ ಗೃಹಲಕ್ಷ್ಮಿ ಕೋಲಾಹಲ

## ಬಿಜೆಪಿ ಸಭಾತ್ಯಾಗ: ಸದನಕ್ಕೆ ತಪ್ಪು ಮಾಹಿತಿ ನೀಡಿದ್ದಕ್ಕೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ವಿಷಾದ

• ಪ್ರಜೋದಯ ವರದಿ

**ಬೆಂಗಳೂರು:** ಗೃಹಲಕ್ಷ್ಮಿ ಯೋಜನೆ ಹಣದ ವಿಚಾರವಾಗಿ ವಿಧಾನಸಭೆ ಅಧಿವೇಶನದಲ್ಲಿ ಆಡಳಿತ ಮತ್ತು ವಿಪಕ್ಷ ಸದಸ್ಯರ ನಡುವೆ ಭಾರೀ ಮಾತಿನ ಸಮರವೇ ನಡೆದಿದ್ದು, ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಸದನಕ್ಕೆ ತಪ್ಪು ಮಾಹಿತಿ ನೀಡಿದ್ದಾರೆಂದು ಆರೋಪಿಸಿ ಬಿಜೆಪಿ ಶಾಸಕರು ಸಭಾತ್ಯಾಗ ಮಾಡಿದರು.

ರಾಜ್ಯ ಸರ್ಕಾರದ ಮಹಿಳಾ ಸಹಾಯ ಯೋಜನೆಯಡಿ 1.26 ಕೋಟಿ ಫಲಾನುಭವಿಗಳಿಗೆ ಎರಡು ತಿಂಗಳ ಕಂತುಗಳನ್ನು ವಿತರಿಸದಿರುವ ಬಗ್ಗೆ ಸಚಿವೆ ತಪ್ಪು ಲೆಕ್ಕ ನೀಡಿರುವುದನ್ನು ವಿರೋಧಿಸಿ ವಿರೋಧ ಪಕ್ಷದ ಸದಸ್ಯರು ಸರ್ಕಾರವನ್ನು ತರಾಟೆಗೆ ತೆಗೆದುಕೊಂಡರು.





### ಸದನದ ಬಾವಿಗಿಳಿದು ಪ್ರತಿಭಟನೆ

ಅಧಿವೇಶನ ಪ್ರಾರಂಭವಾದ ತಕ್ಷಣ, ವಿರೋಧ ಪಕ್ಷದ ಸದಸ್ಯರು ಸಚಿವರ ಉಪಸ್ಥಿತಿಯನ್ನು ಕೋರಿ ಸದನದ ಬಾವಿಗೆ ನುಗ್ಗಿ, ಪ್ರತಿಭಟನೆಗೆ ಮುಂದಾದರು. ಇದು ಕಲಾಪ ಮುಂದೂಡಿಕೆಗೆ ಕಾರಣವಾಯಿತು. ಸದಸ್ಯರು ಮತ್ತೆ ಸಭೆ ಸೇರಿದಾಗ, ಇದು ಕಾಂಗ್ರೆಸ್ ಸರ್ಕಾರದ ವಿಶಿಷ್ಟ ಪ್ರಮುಖ ಕಾರ್ಯಕ್ರಮವಾಗಿದ್ದು, ಇದು ಎಲ್ಲಾ ರಾಜ್ಯಗಳಿಗೆ ಮಾದರಿಯಾಗಿದೆ ಎಂದು ಸಚಿವರು ಉತ್ತರಿಸಿದರು. ಈ ವೇಳೆ ಗದ್ದಲ ಏರ್ಪಟ್ಟಿತು.

ಗೃಹಲಕ್ಷ್ಮಿ ಯೋಜನೆಯ ಪಾವತಿ ಸ್ಥಿತಿಯ ಬಗ್ಗೆ ರಾಜ್ಯ ಸರ್ಕಾರವು ಸದನಕ್ಕೆ ತಪ್ಪು ಮಾಹಿತಿಯನ್ನು ಒದಗಿಸುತ್ತಿದೆ ಎಂದು ವಿರೋಧ ಪಕ್ಷ ಆರೋಪಿಸಿದ ನಂತರ ಪ್ರತಿಭಟನೆ ನಡೆಯಿತು. ಬಿಜೆಪಿ ಪಕ್ಷದ ಸದಸ್ಯರು ಸದನದ ಬಾವಿಗೆ ಇಳಿದು ಘೋಷಣೆಗಳನ್ನು ಕೂಗಿದರು, ಇದು ಸದನದ ಕಲಾಪವನ್ನು ಗಂಟೆಗೂ ಹೆಚ್ಚು ಕಾಲ ಮುಂದೂಡಲು ಕಾರಣವಾಯಿತು.

**ಸದನಕ್ಕೆ ಸುಳ್ಳು ಮಾಹಿತಿ**

ಆಗಸ್ಟ್‌ವರೆಗಿನ ಎಲ್ಲಾ ಕಂತುಗಳನ್ನು ಯೋಜನೆಯಡಿ ಪಾವತಿಸಲಾಗಿದೆ ಎಂದು ಬಿಜೆಪಿ ಶಾಸಕ ಮಹೇಶ್ ಟೆಂಗಿನಕಾಯಿ ಅವರಿಗೆ ಸುಳ್ಳು ಮಾಹಿತಿ ನೀಡುವ ಮೂಲಕ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಸದನವನ್ನು ದಾರಿ ತಪ್ಪಿಸಿದ್ದಾರೆಂದು ಬಿಜೆಪಿ ಶಾಸಕರು ಆರೋಪಿಸಿದರು. ಈ ವರ್ಷದ ಫೆಬ್ರವರಿ ಮತ್ತು ಮಾರ್ಚ್ ತಿಂಗಳ ಕಂತುಗಳನ್ನು ಪಾವತಿಸಲಾಗಿಲ್ಲ. ಕಳೆದ ಮೂರು ದಿನಗಳಿಂದ ಸಚಿವರಿಂದ ವಿವರಣೆಯನ್ನು ಕೇಳಲಾಗುತ್ತಿತ್ತು. ಆದರೆ, ಅವರು ಮಾಹಿತಿ ನೀಡಲು ಎಂದಿಗೂ ಬರಲಿಲ್ಲ ಎಂದು ಬಿಜೆಪಿ ಶಾಸಕರು ಗದ್ದಲ ವ್ಯಕ್ತಪಡಿಸಿದರು.

» ನಾಲ್ಕನೇ ಪುಟದಲ್ಲಿ

# ಸಿಎಂ ಬದಲಾವಣೆ ಹೈಕಮಾಂಡ್‌ಗೆ ಬಿಟ್ಟ ವಿಚಾರ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಮುಖ್ಯಮಂತ್ರಿ ಬದಲಾವಣೆ ವಿಚಾರದಲ್ಲಿ ಮಾತನಾಡುವುದು ಏನೂ ಇಲ್ಲ, ಹೈಕಮಾಂಡ್ ನಿರ್ಣಯವೇ ಅಂತಿಮವೆಂದು ಮಾಜಿ ಸಂಸದ ಡಿ.ಕೆ.ಸುರೇಶ್ ಅವರು ಹೇಳಿದರು.

ಬುಧವಾರ ಧರ್ಮಸ್ಥಳದಿಂದ ಬೆಂಗಳೂರಿಗೆ ವಾಪಾಸ್ಸಾಗುತ್ತಿದ್ದ ವೇಳೆ ತಾಲ್ಲೂಕಿನ ಹಿರೀಸಾವೆ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾಯಕತ್ವ ಬದಲಾವಣೆ ಕುರಿತು ಪರ-ವಿರೋಧ ಇದ್ದೇ ಇರುತ್ತದೆ. ಕಾಂಗ್ರೆಸ್‌ನಲ್ಲಿ ಯಾವ ಗೊಂದಲಗಳಿಲ್ಲ. 140 ಶಾಸಕರು ಹೈಕಮಾಂಡ್ ಆದೇಶಕ್ಕೆ ಬದ್ಧರಾಗಿರುತ್ತಾರೆಂದರು.

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಹುಟ್ಟು ಹೋರಾಟಗಾರ. ಪರಿಶ್ರಮಕ್ಕೆ ಫಲ ದೊರೆಯುತ್ತದೆಂಬ ನಂಬಿಕೆ ಇದೆ. ಬಡವರ ಪರ ಹೋರಾಡುವ ವ್ಯಕ್ತಿ. ಅವರು ರಾಜ್ಯದ ಅಭಿವೃದ್ಧಿಗಾಗಿ



ಬದುಕು ಮುಡಿಪಾಗಿಟ್ಟಿದ್ದಾರೆ. ಜನಪರ ಚಿಂತನೆಯಲ್ಲಿಯೇ ದಿನ ಕಳೆಯುವ ಹಠವಾದಿ. ರಾಜ್ಯ ಕಾಂಗ್ರೆಸ್ ಪಕ್ಷದ ಉಳಿವು ಹಾಗು ಬೆಳವಣಿಗೆಗಾಗಿ ಪಣ ತೊಟ್ಟು ನಿಂತ ಫಕೀರ. ಅದೆಷ್ಟೇ ಅವಮಾನ ಎದುರಾದರೂ ಧೃತಿಗೆಡದೆ ಪಕ್ಷಕ್ಕಾಗಿ ದುಡಿಯುತ್ತಿದ್ದಾರೆ. ರಾಜ್ಯದ ಜನರಿಗೂ ಅದು ಗೊತ್ತಿದೆ ಎಂದರು.

ಸಹೋದರ ಶಿವಕುಮಾರ್ ರಾಜ್ಯದ ಮುಖ್ಯಮಂತ್ರಿಯಾಗಬೇಕೆನ್ನುವುದು ಜನರ ಕನಸು. ಅವರಿಗೆ ಮುಖ್ಯಮಂತ್ರಿ ಸ್ಥಾನ ನೀಡುವ ಕುರಿತು ನಿರ್ಣಯಿಸಲು ಹೈಕಮಾಂಡ್ ಇದೆ. ಮುಂದೊಂದು ದಿನ ಆಸೆ ಈಡೇರುವುದು ಖಚಿತವೆಂದು ಹೇಳಿದರು. ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಉದಯ್ ಕುಮಾರ್, ಮಂಜಣ್ಣ, ಜಯಣ್ಣ, ತ್ಯಾಗರಾಜ್, ಮಹೇಶ್, ನಂಜೇಗೌಡ, ಶ್ರೀಧರ್, ಶಶಿಧರ್, ರಘು, ಪ್ರಕಾಶ್ ಇತರರಿದ್ದರು.

# ಸ್ಥಳೀಯ ಕಾರ್ಯಕ್ರಮಗಳಲ್ಲಿ ಶಾಸಕರ ಅಧ್ಯಕ್ಷತೆಗೆ ಕೋಕ್

## ಅಧಿವೇಶನದಲ್ಲಿ ಶಾಸಕ ಸಿಮೆಂಟ್ ಮಂಜು ಪ್ರಸ್ತಾಪ

• ಪ್ರಜೋದಯ ವರದಿ

**ಹಾಸನ :** ಸರ್ಕಾರಿ ಕಾರ್ಯಕ್ರಮಗಳಲ್ಲಿ ಸ್ಥಳೀಯ ಶಾಸಕರಿಗೆ ಅಧ್ಯಕ್ಷತೆ ನೀಡುವ ಪದ್ಧತಿಯನ್ನು ಇತ್ತೀಚೆಗೆ ಸರ್ಕಾರದ ನಿರ್ದೇಶನದಂತೆ ಕೈ ಬಿಟ್ಟು ಕೇವಲ ಮುಖ್ಯ ಅತಿಥಿಗಳಾಗಿ ಪರಿಗಣಿಸಲಾಗುತ್ತಿದೆ ಎಂದು ಶಾಸಕ ಸಿಮೆಂಟ್ ಮಂಜು ಅವರು ಅಧಿವೇಶನದಲ್ಲಿ ಸರ್ಕಾರದ ಗಮನ ಸೆಳೆದರು.

ಚಳಿಗಾಲದ ಅಧಿವೇಶನದಲ್ಲಿ ಈ ವಿಷಯವನ್ನು ಪ್ರಸ್ತಾಪಿಸಿದ ಅವರು, ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಭಾಗವಹಿಸುವ ಕಾರ್ಯಕ್ರಮಗಳಲ್ಲಿ ಸ್ಥಳೀಯ ಶಾಸಕರೇ ಅಧ್ಯಕ್ಷರಾಗಿರುತ್ತಾರೆ. ಆದರೆ, ಡಿ.6 ರಂದು ಹಾಸನದಲ್ಲಿ ನಡೆದ ಸರ್ಕಾರಿ ಸೇವೆಗಳ ಸಮರ್ಪಣ ಸಮಾವೇಶದ ಆಹ್ವಾನ ಪತ್ರಿಕೆಯಲ್ಲಿ ಶಾಸಕರನ್ನು ಮುಖ್ಯ ಅತಿಥಿಗಳೆಂದು ನಮೂದಿಸಿರುವುದು ಬೇಸರದ ಸಂಗತಿ ಎಂದು ಅಸಮಾಧಾನ ಹೊರ ಹಾಕಿದರು.

ಆಯಾ ಕ್ಷೇತ್ರಗಳಲ್ಲಿ ನಡೆಯುವ



ಸರ್ಕಾರಿ ಕಾರ್ಯಕ್ರಮಗಳಿಗೆ ಸಂಬಂಧಪಟ್ಟ ಕ್ಷೇತ್ರದ ಶಾಸಕರೇ ಅಧ್ಯಕ್ಷತೆ ವಹಿಸಬೇಕೆಂಬುದು ಪ್ರಜಾಪ್ರಭುತ್ವದ ಸಂಪ್ರದಾಯ ಹಾಗು ಜನಪ್ರತಿನಿಧಿಗಳ ಗೌರವದ ದೃಷ್ಟಿಯಿಂದ ಅತ್ಯಂತ ಮಹತ್ವದ್ದೆಂದು ತಿಳಿಸಿದರು.

ಸ್ಥಳೀಯ ಶಾಸಕರು ಜನರಿಂದ ನೇರವಾಗಿ ಆಯ್ಕೆಯಾಗಿರುವ ಪ್ರತಿನಿಧಿಗಳಾಗಿರುವುದರಿಂದ, ಅವರ ಕ್ಷೇತ್ರದಲ್ಲಿ ನಡೆಯುವ ಸರ್ಕಾರಿ ಕಾರ್ಯಕ್ರಮಗಳಿಗೆ ಅಧ್ಯಕ್ಷತೆ ನೀಡುವುದು ಪದ್ಧತಿ. ಇದರಿಂದ ಆಡಳಿತ ಮತ್ತು ಜನರ ನಡುವಿನ ಸಂಪರ್ಕ ಮತ್ತಷ್ಟು ಬಲಗೊಳ್ಳುತ್ತದೆ ಎಂದು ಅವರು ತಿಳಿಸಿದರು.

ಈ ಹಿಂದಿನ ಪದ್ಧತಿಯನ್ನು, ಕ್ಷೇತ್ರದ ಶಾಸಕರಿಗೆ ಅಧ್ಯಕ್ಷತೆ ನೀಡುವಂತೆ ಸರ್ಕಾರ ಸ್ಪಷ್ಟ ನಿರ್ದೇಶನ ನೀಡಬೇಕೆಂದು ಸದನದ ಮೂಲಕ ಮನವಿ ಮಾಡಿದರು. ಈ ವಿಚಾರಕ್ಕೆ ಸಂಬಂಧಿಸಿದಂತೆ ಸರ್ಕಾರದಿಂದ ಸೂಕ್ತ ನಿರ್ಧಾರ ಕೈಗೊಳ್ಳುವಂತೆ ಒತ್ತಾಯಿಸಿದರು.

ಪ್ರತಿಕ್ರಿಯಿಸಿದ ಸಭಾಪತಿ ಯು.ಟಿ.ಖಾದರ್ ಅವರು, ನಿಮ್ಮ ಭಾವನೆಗಳನ್ನು ಸ್ಪಷ್ಟವಾಗಿ ಅರ್ಥ ಮಾಡಿಕೊಂಡು ಮುಖ್ಯಮಂತ್ರಿ ಹಾಗು ಅಧಿಕಾರಿಗಳಿಂದ ಮಾಹಿತಿ ಪಡೆದು ಕಾನೂನು ಸಚಿವರು ಸದನದಲ್ಲಿ ಉತ್ತರಿಸಲಿದ್ದಾರೆ. ಶಾಸಕರು ಹಾಗು ಜನಪ್ರತಿನಿಧಿಗಳಿಗೆ ಗೌರವ ಹಾಗು ಸವಲತ್ತುಗಳು ಸಂವಿಧಾನ ಬದ್ಧವಾದದ್ದು, ಅದನ್ನು ಸರ್ಕಾರ ನೀಡುವುದು ಜವಾಬ್ದಾರಿಯಾಗಿದೆ ಎಂದರು.

# ಕೆಎಂಎಫ್ ಪಶು ಆಹಾರ ಕೇಂದ್ರಕ್ಕೆ ರೈತರ ಮುತ್ತಿಗೆ

## ಜೋಳ ಖರೀದಿಗೆ ರೈತರ ಬದಲು ದಲ್ಲಾಳಿಗಳಿಗೆ ಟೋಕನ್ ನೀಡಿರುವ ಆರೋಪ : ದಿಢೀರ್ ಪ್ರತಿಭಟನೆ

• ಪ್ರಜೋದಯ ವರದಿ

**ಹಾಸನ:** ರೈತರಿಂದ 50 ಕ್ವಿಂಟಾಲ್ ಮೆಕ್ಕೆಜೋಳ ಖರೀದಿ ಮಾಡಬೇಕೆಂದು ಸರ್ಕಾರ ಆದೇಶಿಸಿದ್ದರೂ, 20 ಕ್ವಿಂಟಾಲ್ ಮಾತ್ರ ಖರೀದಿ ಮಾಡಲಾಗುತ್ತಿದೆ. ರೈತರಿಗೆ ಟೋಕನ್ ನೀಡದೆ, ದಲ್ಲಾಳಿಗಳಿಗೆ ನೀಡಲಾಗುತ್ತಿದೆ ಎಂದು ಆರೋಪಿಸಿ ರೈತರು ಬುಧವಾರ ನಗರದ ಕೆಎಂಎಫ್ ಪಶು ಆಹಾರ ಕೇಂದ್ರಕ್ಕೆ ಮುತ್ತಿಗೆ ಹಾಕಿ ದಿಢೀರ್ ಪ್ರತಿಭಟನೆ ನಡೆಸಿದರು.

ರೈತರು, ವಿವಿಧ ರಾಜಕೀಯ ಪಕ್ಷಗಳು ಹೋರಾಟಕ್ಕೆ ಮಣಿದ ರಾಜ್ಯ ಸರ್ಕಾರ ಕೆಎಂಎಫ್‌ನಿಂದ 10 ಸಾವಿರ ಮೆಟ್ರಿಕ್ ಟನ್ ಮೆಕ್ಕೆಜೋಳ ಖರೀದಿಸುವಂತೆ ಸೂಚನೆ ನೀಡಿತ್ತು. ಅದರಂತೆ ಹಾಸನ ಕೆಎಂಎಫ್ ಪಶು ಆಹಾರ ಕೇಂದ್ರದಲ್ಲಿ ಮಂಗಳವಾರದವರೆಗೂ 9 ಸಾವಿರ ಮೆಟ್ರಿಕ್ ಟನ್ ಖರೀದಿಸಿದ್ದು, ಉಳಿದ ಒಂದು ಸಾವಿರ ಮೆಟ್ರಿಕ್ ಟನ್ ಜೋಳವನ್ನು ರೈತರಿಂದ ಖರೀದಿಸದಿರಲು ಕೆಎಂಎಫ್





### ಪ್ರತಿಭಟನೆಗೆ ಮಣಿದ ಅಧಿಕಾರಿಗಳು

ರೈತರ ಆಕ್ರೋಶಕ್ಕೆ ಮಣಿದ ಕೆಎಂಎಫ್ ಅಧಿಕಾರಿಗಳು ಈಗಾಗಲೇ ಕೆಎಂಎಫ್ ಬಳಿ ಬಂದಿರುವ ರೈತರ ಜೋಳವನ್ನು ದಿನಾಂಕ ನಿಗದಿ ಮಾಡಿ ಖರೀದಿಸುತ್ತೇವೆ. ನಿಮ್ಮ ಆಧಾರ್‌ಕಾರ್ಡ್ ಹಾಗು ದಾಖಲೆಗಳನ್ನು ನೀಡಿ ತಿಳಿಸಿದ ದಿನಾಂಕದಂದು ಬಂದು ಮೆಕ್ಕೆಜೋಳ ನೀಡುವಂತೆ ತಿಳಿಸಿದರು. ನಂತರ ರೈತರು ಪ್ರತಿಭಟನೆ ಹಿಂಪಡೆದರು.

ಮುಂದಾಗಿದೆ. ಈ ವಿಷಯ ತಿಳಿದ ರೈತರು ಲೋಡ್‌ಗಟ್ಟಲೆ ಜೋಳ ತುಂಬಿಕೊಂಡು ಕೆಎಂಎಫ್ ಮುಂದೆ ಬಂದಿದ್ದಾರೆ. ಅದನ್ನು ಕಂಡ ಕೆಎಂಎಫ್ ಅಧಿಕಾರಿಗಳು ಮಂಗಳವಾರವೇ ಒಂದು ಸಾವಿರ ಮೆಟ್ರಿಕ್ ಟನ್ ಖರೀದಿಸಲಾಗಿದೆ ಎಂದು ಹೇಳಿದ್ದು, ಇದರಿಂದ ಕೆರಳಿದ ರೈತರು ಅಧಿಕಾರಿಗಳ ವಿರುದ್ಧ ಕಿಡಿಕಾರಿದರು.

ರೈತರ ಫಸಲು ಬರುವ ಮುನ್ನವೇ ದಲ್ಲಾಳಿಗಳಿಂದ 23 ಸಾವಿರ ಮೆಟ್ರಿಕ್ ಟನ್ ಜೋಳ ಖರೀದಿ ಮಾಡಿದ್ದು, ಇದರಿಂದ ರೈತರಿಗೆ ಅನ್ಯಾಯವಾಗುತ್ತಿದೆ. ಕೂಡಲೇ ರೈತರಿಂದ ಜೋಳ ಖರೀದಿ ಮಾಡಬೇಕು. ಇಲ್ಲವಾದಲ್ಲಿ ಉಗ್ರ ಹೋರಾಟ ನಡೆಸಲಾಗುವುದೆಂದು ಎಚ್ಚರಿಕೆ ನೀಡಿದರು.

33 ಸಾವಿರ ಮೆಟ್ರಿಕ್ ಟನ್ ಮೆಕ್ಕೆಜೋಳ ಖರೀದಿ ಸಾಮರ್ಥ್ಯ ಹೊಂದಿರುವ ಹಾಸನ ಕೆಎಂಎಫ್ ದಲ್ಲಾಳಿಗಳಿಂದ 23 ಸಾವಿರ ಮೆಟ್ರಿಕ್ ಟನ್ ಜೋಳ ಖರೀದಿ ಮಾಡಿದೆ. ಸರ್ಕಾರದ ಆದೇಶದಂತೆ ರೈತರಿಂದ ಮೆಕ್ಕೆಜೋಳ ಖರೀದಿ ಮಾಡಿಲ್ಲವೆಂದು ಆಕ್ರೋಶ ವ್ಯಕ್ತಪಡಿಸಿದರು. ಈ ವೇಳೆ ರೈತರು ಹಾಗು ಅಧಿಕಾರಿಗಳ ನಡುವೆ ಮಾತಿನ ಚಕಮಕಿ ನಡೆಯಿತು. ರೈತರಿಂದಲೇ ನೇರವಾಗಿ ಜೋಳ ಖರೀದಿ ಮಾಡಬೇಕೆಂದು ಪಟ್ಟು ಹಿಡಿದರು.

# ಹೆಣ್ಣು ಮಕ್ಕಳಿಗೆ ಸುಂದರ ಬಾಲ್ಯ ಕಲ್ಪಿಸಿ : ಲತಾಕುಮಾರಿ

• ಪ್ರಜೋದಯ ವರದಿ

**ಹಾಸನ:** ಹೆಣ್ಣು ಮಗಳಿಗೆ ಮದುವೆ ಮಾಡಿಕೊಟ್ಟರೆ ಜವಾಬ್ದಾರಿ ಮುಗಿಯಿತು ಎಂಬ ಮನೋಭಾವದಿಂದ ಹೊರಬಂದು, ಮಗಳಿಗೆ ಸುಂದರ ಬಾಲ್ಯ ಕಲ್ಪಿಸುವತ್ತ ಪೋಷಕರು ಗಮನ ಹರಿಸಬೇಕೆಂದು ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅವರು ಸಲಹೆ ನೀಡಿದರು.

ಬುಧವಾರ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ಬಾಲ್ಯ ನ್ಯಾಯ, ಪೋಕ್ಸೋ ಹಾಗು ಮಕ್ಕಳ ಸಂರಕ್ಷಣಾ ಯೋಜನೆ ಕುರಿತು ಏರ್ಪಡಿಸಿದ್ದ ತರಬೇತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮಕ್ಕಳ ಸಮಸ್ಯೆಗಳನ್ನು ಕೇವಲ ಕಚೇರಿಯಲ್ಲಿ ಕುಳಿತು ಚರ್ಚಿಸಿದರೆ ಸಾಲದು. ಮಕ್ಕಳೊಂದಿಗೆ ಬೆರೆತು, ಅವರ ನೋವು-ನಲಿವುಗಳನ್ನು ಅರಿತು ಪರಿಹಾರ ಕಂಡುಕೊಳ್ಳಬೇಕಿದೆ ಎಂದರು.

ಮಕ್ಕಳ ಮೇಲೆ ನಡೆಯುತ್ತಿರುವ ದೌರ್ಜನ್ಯಗಳ ವಿರುದ್ಧದ ಪ್ರಕ್ರಿಯೆಯಲ್ಲಿ ನಾಗರಿಕ ಸಮಾಜದ ಪಾತ್ರ ಪ್ರಶ್ನಾರ್ಹವಾಗಿದೆ. ಪೋಕ್ಸೋ



ಕಾಯ್ದೆಯಡಿ ದೂರು ದಾಖಲಾದರೂ ಕೆಲವೊಮ್ಮೆ ಅಪರಾಧಿಗಳು ಜೈಲಿನಿಂದ ಹೊರಬರುತ್ತಿರುವುದು ಮಗು ಅನುಭವಿಸುವ ನೋವಿಗೆ ಕಾರಣವಾಗುತ್ತಿದೆ. ಇಂತಹ ಹಿಂಸಾತ್ಮಕ ಕೃತ್ಯಗಳಿಗೆ ಕೊನೆ ಹಾಡಲೇಬೇಕೆಂದರು.

ಹೆಣ್ಣು ಮಕ್ಕಳಿಗೆ ಸುಂದರ ಬಾಲ್ಯ ಕಲ್ಪಿಸುವುದು ಪೋಷಕರ ಜವಾಬ್ದಾರಿ. ಮಗಳಿಗೆ 18 ವರ್ಷ ತುಂಬುವುದನ್ನೇ ಚಾತಕ ಪಕ್ಷಿಯಂತೆ ಕಾದು ಮದುವೆ ಮಾಡಿಕೊಡುತ್ತಾರೆ. ಹದಿಹರೆಯದ ವಯಸ್ಸಿನಲ್ಲಿ ಗೊತ್ತಿಲ್ಲದೆ ಆಗುವ ತಪ್ಪುಗಳನ್ನು ಪದೇ ಪದೇ ಕೆಣಕುತ್ತಾ ಅವರ ಭವಿಷ್ಯವನ್ನೇ ಹಾಳು ಮಾಡುತ್ತಾರೆ. ಈ ನಿಟ್ಟಿನಲ್ಲಿ ಎಲ್ಲರ ಮನಸ್ಥಿತಿ ಬದಲಾಗಬೇಕೆಂದರು.

**ಡಿಸ್ಕಸ್ ವಿಥ್ ಡಿಸಿ**

ಜಿಲ್ಲೆಯ ವಿವಿಧ ವಸತಿ ನಿಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿನಿಯರ ಅಹವಾಲು ಸ್ವೀಕರಿಸುವ ಉದ್ದೇಶದಿಂದ ಪ್ರತಿ ಮಂಗಳವಾರ ಭೇಟಿ ನೀಡುವ ಯೋಜನೆ ಹಾಕಿಕೊಳ್ಳಲಾಗಿದೆ ಎಂದು ತಿಳಿಸಿದರು.

ಅಂಗವಿಕಲ ಪುನರ್ವಸತಿ ಕಾರ್ಯಕರ್ತರು ಸಮಾಜದ ಬಲವಾದ ಶಕ್ತಿಯಾಗಿದ್ದು, ಸರ್ಕಾರದ ಯೋಜನೆಗಳು ಅರ್ಹರಿಗೆ ತಲುಪಿಸುವಲ್ಲಿ ಅವರ ಪಾತ್ರ ಗಮನಾರ್ಹ ವಾಗಿದೆ. ಏನೇ ಸಮಸ್ಯೆಗಳಿದ್ದರೂ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳ ಗಮನಕ್ಕೆ ತರಬೇಕೆಂದರು.

ಅಂಗವಿಕಲರ ಇಲಾಖೆ ಯೋಜನಾ ನಿರ್ದೇಶಕ ಚಂದ್ರಮೌಳಿ ಅವರು ಮಾತನಾಡಿ, ಅಂಗವಿಕಲರಿಗಾಗಿ ಸ್ಥಳೀಯ ಸಂಸ್ಥೆಗಳಲ್ಲಿ ಶೇ.5 ರಷ್ಟು ಅನುದಾನ ಮೀಸಲಿಡಲಾಗುತ್ತದೆ. ಆದರೆ, ಎಲ್ಲಾ ಕಡೆ ಅದರ ಸದುಪಯೋಗ ಆಗುತ್ತಿಲ್ಲ. ಹಲವೆಡೆ ಪಂಚಾಯಿತಿಗಳಲ್ಲಿ ಅಂಗವಿಕಲರಿಗೆ ಕೂರಲು ಸಹ ಸೂಕ್ತ ವ್ಯವಸ್ಥೆ ಇಲ್ಲದಿರುವುದು ದುರಂತ. ಅಧಿಕಾರಿಗಳು ನೆಲಮಟ್ಟದ ಸಮಸ್ಯೆಗಳನ್ನು ಅರಿತು, ಯಾವುದೇ ಅಡಚಣೆಗಳಿದ್ದರೂ ಪರಿಹಾರ ಕಂಡುಕೊಳ್ಳುವ ಮನೋಭಾವ ಹೊಂದಬೇಕೆಂದರು. ವೇದಿಕೆ ಕಾರ್ಯಕ್ರಮದ ಬಳಿಕ ಅಂಗವಿಕಲ ಪುನರ್ವಸತಿ ಕಾರ್ಯಕರ್ತರ ಅಹವಾಲು ಸ್ವೀಕಾರ ಹಾಗು ಕಾರ್ಯಾಗಾರ ನಡೆಯಿತು. ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ವೆಂಕಟೇಶ್, ಜಿಲ್ಲಾ ವಿಕಲಚೇತನರು ಮತ್ತು ನಾಗರಿಕರ ಸಬಲೀಕರಣ ಇಲಾಖೆ ಅಧಿಕಾರಿ ಕೆ.ಆರ್.ಅನುಪಮಾ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಕೆ.ಜಿ. ದಿಲೀಪ್, ಕಾಂತರಾಜ್ ಇತರರಿದ್ದರು.

## ಅನಾರೋಗ್ಯ : ಕಲಾಪದಿಂದ ಹೊರಗುಳಿದ ಸಿಎಂ

• ಪ್ರಜೋದಯ ವರದಿ

**ಬೆಳಗಾವಿ:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಆರೋಗ್ಯದಲ್ಲಿ ತುಸು ಏರುಪೇರಾದ ಕಾರಣದಿಂದ ಬುಧವಾರ ಅವರು ಸದನ ಕಲಾಪಗಳಿಂದ ದೂರ ಉಳಿದರು.

ನಗರದ ಪ್ರವಾಸಿ ಮಂದಿರದಲ್ಲೇ ಇಡೀ ದಿನ ವಿಶ್ರಾಂತಿ ಪಡೆದರು. ಗೋಕಾಕ ಶಾಸಕ ರಮೇಶ್ ಜಾರಕಿಹೊಳಿ ಪ್ರವಾಸಿ ಮಂದಿರಕ್ಕೆ ಬಂದು ಸಿದ್ದರಾಮಯ್ಯ ಅವರ ಆರೋಗ್ಯ ವಿಚಾರಿಸಿದರು. ಆರೋಗ್ಯ ವಿಚಾರಿಸಲು ಮಾತ್ರ ಬಂದಿದ್ದೇನೆ. ರಾಜಕೀಯ, ಅಭಿವೃದ್ಧಿ ಯಾವುದೇ ಚರ್ಚೆ ಮಾಡಿಲ್ಲ. ಅವರಿಗೆ ಧೈರ್ಯ ಹೇಳೋಣ ಎಂದು ಬಂದಿದ್ದೆ. ಅವರೇ ನಮಗೆ ಧೈರ್ಯ ಹೇಳುವಷ್ಟು ಆರೋಗ್ಯವಾಗಿದ್ದಾರೆಂದು ರಮೇಶ್ ಜಾರಕಿಹೊಳಿ ಮಾಧ್ಯಮದವರಿಗೆ ಪ್ರತಿಕ್ರಿಯೆ ನೀಡಿದರು.

ನಂತರ ಸಚಿವ ಭೈರತಿ ಸುರೇಶ್ ಶಾಸಕ ಜಿ.ಟಿ.ದೇವೇಗೌಡ, ವಿಧಾನ ಪರಿಷತ್ ಸದಸ್ಯ ಯತೀಂದ್ರ ಸೇರಿ ಹಲವರು ಭೇಟಿ ನೀಡಿದರು.

# ಹೋರಾಟಗಾರರ ವಿರುದ್ಧ ಕೇಸ್ ವಾಪಾಸ್‌ಗೆ ಪ್ರಯತ್ನ

• ಪ್ರಜೋದಯ ವರದಿ

**ಸಕಲೇಶಪುರ:** ಮೈಸೂರು ದಸರಾ ಅಂಬಾರಿ ಹೊರುತ್ತಿದ್ದ ಅರ್ಜುನ ಆನೆಯ ಸ್ಮಾರಕ ನಿರ್ಮಾಣಕ್ಕಾಗಿ ಆಗ್ರಹಿಸಿದ 19 ಹೋರಾಟಗಾರರ ವಿರುದ್ಧ ದಾಖಲಾಗಿರುವ ಪ್ರಕರಣ ವಾಪಾಸ್‌ಗೆ ಪ್ರಯತ್ನ ನಡೆಸಲಾಗುತ್ತಿದೆ ಎಂದು ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಮುರಳಿ ಮೋಹನ್ ಅವರು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಬುಧವಾರ ಮಾತನಾಡಿದ ಅವರು, ಅರ್ಜುನ ನಾಡಿನ ಸಾಂಸ್ಕೃತಿಕ ಸಂಕೇತ. 2023ರ ಡಿ. 4ರಂದು ನಡೆದ ಘಟನೆ ರಾಜ್ಯದ ಜನರಿಗೆ ಬೇಸರ ತರಿಸಿದೆ. ವೀರ ಮರಣವಪ್ಪಿದ ಸ್ಥಳದಲ್ಲಿ ಅಂತ್ಯಕ್ರಿಯೆ ಹಾಗು ಸ್ಮಾರಕ ನಿರ್ಮಿಸಬೇಕೆಂದು ಪ್ರತಿಭಟನೆ ನಡೆಸಿರುವುದು ನ್ಯಾಯ ಮಾರ್ಗ. ಆದರೆ, ಅರಣ್ಯ ಇಲಾಖೆ ಪ್ರಕರಣ ದಾಖಲಿಸಿರುವುದು ಖಂಡನೀಯವೆಂದರು.

ಈ ಸಂಬಂಧ ಇಲಾಖೆ ಅಧಿಕಾರಿಗಳಿಂದ ಮಾಹಿತಿ ಪಡೆದಿದ್ದು, ಮುಖ್ಯ





ಮಂತ್ರಿ ಅವರ ಗಮನಕ್ಕೂ ತರಲಾಗಿದೆ. ಬೆಳಗಾವಿ ಅಧಿವೇಶನ ಮುಗಿದ ಬಳಿಕ ಮತ್ತೊಮ್ಮೆ ಚರ್ಚಿಸಿ ಕೇಸ್ ವಾಪಾಸ್‌ಗೆ ಕ್ರಮ ಕೈಗೊಳ್ಳಲಾಗುವುದೆಂದು ಭರವಸೆ ನೀಡಿದರು.

ಹೋರಾಟದ ಹೆಸರಿನಲ್ಲಿ ಕೆಲ ಸಂಘಟನೆಗಳು ಅಧಿಕಾರಿಗಳನ್ನು ಬೆದರಿಸುವುದು, ಬಡವರು ಹಾಗು ಕೂಲಿ ಕಾರ್ಮಿಕರ ಪರವೆಂದು ಸಮಾಜವನ್ನು ತಪ್ಪು ದಿಕ್ಕಿಗೆ ಕರೆದೊಯ್ಯುವ ಕೆಲಸಗಳು ನಡೆಯುತ್ತಿವೆ. ಸುಖಾಸುಮ್ಮನೆ ಆರ್‌ಟಿಐ ಅರ್ಜಿ ಸಲ್ಲಿಸಿ ಅಧಿಕಾರಿಗಳನ್ನು ಹೆದರಿಸಿ ಹಣ ಪಡೆಯುವವರ ವಿರುದ್ಧ ಪ್ರಜ್ಞಾವಂತರು, ರಾಜಕೀಯ ನಾಯಕರು ಎಚ್ಚರ ವಹಿಸಬೇಕೆಂದರು. ತಾಲ್ಲೂಕು ಕಾಂಗ್ರೆಸ್ ಅಧ್ಯಕ್ಷ ಬೈರಮುಡಿ ಚಂದ್ರು ಅವರು ಮಾತನಾಡಿ, ಅರ್ಜುನ ಆನೆಯ ಪರವಾಗಿ ಹೋರಾಟ ನಡೆಸಿದವರ ವಿರುದ್ಧ ಪ್ರಕರಣ ದಾಖಲಾಗಿರುವುದನ್ನು ನಾಗರಿಕ ಸಮಾಜ ಸಹಿಸುವುದಿಲ್ಲ. ಆನೆಯ ಸಾವಿನಿಂದ ಉಂಟಾದ ಆಕ್ರೋಶ ಮಾನವ ಸಹಜ. ಇದು ಅನಿರೀಕ್ಷಿತ ಘಟನೆಯಾಗಿದೆ. ಹೋರಾಟಗಾರರು ಆತಂಕಪಡುವ ಅಗತ್ಯವಿಲ್ಲ. ನ್ಯಾಯಯುತ ಹೋರಾಟಗಾರರ ಮೇಲೆ ದಾಖಲಾದ ದಾವೆಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಅವರಿಗೆ ನ್ಯಾಯ ಒದಗಿಸುವುದಾಗಿ ಪಕ್ಷದ ವರಿಷ್ಠರು ಭರವಸೆ ನೀಡಿದ್ದಾರೆಂದರು.

ತಾಲ್ಲೂಕು ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಸಯ್ಯದ್ ಮುಫೀಜ್, ಕಾಂಗ್ರೆಸ್ ಎಸ್‌ಸಿ, ಎಸ್‌ಟಿ ಘಟಕದ ಅಧ್ಯಕ್ಷ ಕಲ್ಗಣೆ ಪ್ರಶಾಂತ್, ಪ್ರಾಧಿಕಾರದ ಸದಸ್ಯರಾದ ವಿಜಯ್, ಉದಯ್ ಇತರರಿದ್ದರು.

## ಪರಿಹಾರ ನೀಡಲು ವಿಳಂಬ: ಸಾರಿಗೆ ಬಸ್ ಜಪ್ತಿ





• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಅಪಘಾತದಲ್ಲಿ ಮೃತಪಟ್ಟ ಮಹಿಳೆಯ ಕುಟುಂಬಕ್ಕೆ ಪರಿಹಾರ ನೀಡುವಲ್ಲಿ ವಿಳಂಬ ಹಾಗು ಅಸಡ್ಡೆ ತೋರಿದ್ದರಿಂದ ನ್ಯಾಯಾಲಯದ ಆದೇಶದ ಮೇರೆಗೆ ಕೆಎಸ್‌ಆರ್‌ಟಿಸಿ ಬಸ್‌ನ್ನು ಬುಧವಾರ ಜಪ್ತಿ ಮಾಡಲಾಯಿತು.

ಪಟ್ಟಣದ ಬಸ್ ನಿಲ್ದಾಣದಲ್ಲಿ ನಿಲ್ಲಿಸಿದ್ದ ಚಿಕ್ಕಮಗಳೂರು ಡಿಪೋಗೆ ಸೇರಿದ ಬಸ್‌ನ್ನು ವಕೀಲರು ನ್ಯಾಯಾಲಯ ಆದೇಶ ಪ್ರತಿ ತೋರಿಸಿ ಜಪ್ತಿ ಮಾಡಿ ಕೋರ್ಟ್ ಆವರಣದಲ್ಲಿ ನಿಲ್ಲಿಸಿದರು. ತಾಲ್ಲೂಕಿನ ಪೂಮಡಿ ಹಳ್ಳಿ ಗ್ರಾಮದ ರಾಮಚಂದ್ರ ಹಾಗು ವಸಂತ ಎಂಬುವವರ ಪುತ್ರಿ ಲಲಿತಾ 15 ವರ್ಷಗಳ ಹಿಂದೆ ಅಪಘಾತದಲ್ಲಿ ಮೃತಪಟ್ಟಿದ್ದರು. ಈ ಸಂಬಂಧ ಕುಟುಂಬಸ್ಥರಿಗೆ 5.50 ಲ.ರೂ. ಪರಿಹಾರ ನೀಡುವಂತೆ ಜೆಎಂಎಫ್‌ಸಿ ನ್ಯಾಯಾಲಯ ಆದೇಶಿಸಿತ್ತು. ವರ್ಷಗಳು ಉರುಳಿದರೂ ಕೆಎಸ್‌ಆರ್‌ಟಿಸಿ ಪರಿಹಾರ ನೀಡಲು ವಿಳಂಬ ಮಾಡಿದ್ದರಿಂದ ಹೈಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಲಾಗಿತ್ತು. ಅಲ್ಲಿಯೂ ಮೃತರಿಗೆ ಪರಿಹಾರ ಒದಗಿಸ ಬೇಕೆಂದು ಆದೇಶವಾಗಿತ್ತು. ವಕೀಲ ವೈ.ಕೆ. ಪುಟ್ಟಸ್ವಾಮಿಗೌಡ ಮತ್ತಿತರರಿದ್ದರು.

# ಅಂಗಾಂಗ ದಾನ ಮಾಡಿ ಸಾವಿನಲ್ಲೂ ಸಾರ್ಥಕತೆ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಅಪಘಾತದಲ್ಲಿ ಗಂಭೀರವಾಗಿ ಗಾಯಗೊಂಡು ಮೆದುಳು ನಿಷ್ಕ್ರಿಯಗೊಂಡಿದ್ದ ವ್ಯಕ್ತಿಯ ಅಂಗಾಂಗ ದಾನ ಮಾಡುವ ಮೂಲಕ ಪೋಷಕರು ಮಾನವೀಯತೆ ಮೆರೆದಿರುವ ಘಟನೆ ಬುಧವಾರ ನಗರದಲ್ಲಿ ನಡೆದಿದೆ.

ಚಿಕಿತ್ಸೆಗೆ ಸ್ಪಂದಿಸದೆ ಸಾವನ್ನಪ್ಪಿದ್ದ ವ್ಯಕ್ತಿ ಸತ್ತ ಬಳಿಕವಾದರೂ ಬೇರೆಯವರಿಗೆ ಅನುಕೂಲವಾಗಲಿ ಎಂಬ ಸದುದ್ದೇಶದಿಂದ ಅಂಗಾಂಗ ದಾನಕ್ಕೆ ಸಹಕರಿಸುವಂತೆ ಪೋಷಕರ ಮನವೊಲಿಸುವಲ್ಲಿ ಹಿಮ್ಸ್ ವೈದ್ಯಾಧಿಕಾರಿಗಳು ಯಶಸ್ವಿಯಾಗಿದ್ದಾರೆ.

ಚನ್ನರಾಯಪಟ್ಟಣ ತಾಲ್ಲೂಕು ಸಾಗತವಳ್ಳಿ ಗ್ರಾಮದ ನಂಜಮ್ಮ ಹಾಗು ನಂಜುಂಡೇಗೌಡ ದಂಪತಿಯ ಪುತ್ರ ಯೋಗೇಶ್ (35) ಡಿ. 14 ರಂದು ಪಟ್ಟಣದ ಬೈಪಾಸ್‌ನಲ್ಲಿ ನಡೆದ ಅಪಘಾತದಲ್ಲಿ ಗಂಭೀರವಾಗಿ





ಗಾಯಗೊಂಡಿದ್ದರು. ಹಾಸನದ ಖಾಸಗಿ ಆಸ್ಪತ್ರೆಗೆ ದಾಖಲಿಸಿದ್ದ ಅವರನ್ನು ಬೆಂಗಳೂರಿನ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಅಲ್ಲಿಯೂ ಚಿಕಿತ್ಸೆ ಅಸಾಧ್ಯವೆಂದು ಗೊತ್ತಾದಾಗ ಡಿ.16ರ ಸಂಜೆ ಹಿಮ್ಸ್‌ಗೆ ದಾಖಲಿಸಲಾಗಿತ್ತು. ಮೆದುಳಿಗೆ ಬಲವಾದ ಪೆಟ್ಟು ಬಿದ್ದಿದ್ದರಿಂದ ಯೋಗೇಶ್ ಬದುಕುಳಿಯುವುದು ಕಷ್ಟ ಎಂಬುದನ್ನು ವೈದ್ಯರು ಪೋಷಕರಿಗೆ ತಿಳಿಸಿದ್ದರು. ದುಃಖದ ಕ್ಷಣದಲ್ಲೂ ಪೋಷಕರು ಮಹತ್ವದ ನಿರ್ಧಾರ ತೆಗೆದುಕೊಂಡು ಮಗನ ಲಿವರ್ ಹಾಗು ಹೃದಯದ ಪಂಪ್ ವಾಲ್ವ್‌ಗಳನ್ನು ದಾನ ಮಾಡಲು ಒಪ್ಪಿದರು. ಅಂಗಾಂಗಗಳನ್ನು ಝೀರೋ ಟ್ರಾಫಿಕ್ ವ್ಯವಸ್ಥೆಯಲ್ಲಿ ಆ್ಯಂಬುಲೆನ್ಸ್ ಮೂಲಕ ಮೈಸೂರಿನ ಅಪೋಲೋ ಆಸ್ಪತ್ರೆಗೆ ರವಾನನಿಸಲಾಯಿತು. ಯೋಗೇಶ್ ಅವರ ಅಂಗಾಂಗಗಳಿಂದ ಕನಿಷ್ಠ 10 ಜನರ ಪ್ರಾಣ ಉಳಿಸಬಹುದೆಂದು ಹಿಮ್ಸ್ ವೈದ್ಯಕೀಯ ಅಧೀಕ್ಷಕ ಡಾ|| ರಾಘವೇಂದ್ರ ಅವರು ಹೇಳಿದರು.

**ಝೀರೋ ಟ್ರಾಫಿಕ್‌ನಲ್ಲೇ ರವಾನೆ**

ಅಪಘಾತ, ಶಸ್ತ್ರ ಚಿಕಿತ್ಸೆ ಮತ್ತಿತರ ಸಂದರ್ಭದಲ್ಲಿ ಅಂಗಾಂಗಗಳ ಅವಶ್ಯಕತೆ ಹೆಚ್ಚಿರುತ್ತದೆ. ಸರ್ಕಾರವೇ ರಚಿಸಿರುವ ಸ್ಯಾಕ್ರೊ ಆಕ್ಸಿಪಿಟಲ್ ಟೆಕ್ನಿಕ್ ಆರ್ಗನೈಸೇಶನ್‌ನಲ್ಲಿ ಈ ಕುರಿತ ಮಾಹಿತಿ ಅಪ್ಡೇಟ್ ಆಗುತ್ತಿ ರುತ್ತದೆ. ತಕ್ಷಣಕ್ಕೆ ಅಂಗಾಂಗ ಬೇಕಾದಾಗ ತುರ್ತಾಗಿ ತಲುಪಿಸಲು ಝೀರೋ ಟ್ರಾಫಿಕ್ ವ್ಯವಸ್ಥೆಯನ್ನು ಬಳಸಿಕೊಳ್ಳುವ ಅವಕಾಶವಿದೆ. ಯೋಗೇಶ್ ಅವರ ಅಂಗಾಂಗಗಳು ಅತ್ಯವಶ್ಯಕವಾಗಿ ಬೇಕಿದ್ದರಿಂದ ಮೈಸೂರಿಗೆ ಶೀಘ್ರವಾಗಿ ರವಾನಿಸಲಾಯಿತು.

**ವರ್ಷದಲ್ಲಿ 2ನೇ ಪ್ರಕರಣ**

ಝೀರೋ ಟ್ರಾಫಿಕ್ ಮೂಲಕ ಅಂಗಾಂಗಗಳ ರವಾನಿಸಿದ ವರ್ಷದ ಎರಡನೇ ಪ್ರಕರಣ ಇದಾಗಿದೆ. ತಿಪಟೂರಿನಲ್ಲಿ ಸಂಭವಿಸಿದ್ದ ಅಪಘಾತದಲ್ಲಿ ಬ್ರೈನ್ ಡೆಡ್ ಆಗಿದ್ದ ಚಂದನ ಎಂಬ 13 ವರ್ಷದ ಬಾಲಕಿಯ ಅಂಗಾಂಗಗಳನ್ನು ಹಾಸನದ ಹಿಮ್ಸ್‌ನಿಂದ ಮೈಸೂರಿಗೆ ಕಳುಹಿಸಿಕೊಡಲಾಗಿತ್ತು.

## 23 ದಿನಗಳ ಬಳಿಕ ನಾಲೆಯಲ್ಲಿ ರೈತನ ಶವ ಪತ್ತೆ

• ಪ್ರಜೋದಯ ವರದಿ



**ಚನ್ನರಾಯಪಟ್ಟಣ:** ನಾಪತ್ತೆಯಾಗಿದ್ದ ರೈತನ ಮೃತದೇಹ 23 ದಿನಗಳ ಬಳಿಕ ಹೇಮಾವತಿ ನಾಲೆಯಲ್ಲಿ ಪತ್ತೆಯಾ ಗಿದ್ದು, ಸಾಲಭಾದೆ ತಾಳಲಾರದೆ ಆತ್ಮಹತ್ಯೆಗೆ ಶರಣಾಗಿರುವ ಶಂಕೆ ವ್ಯಕ್ತ ವಾಗಿದೆ.

ತಾಲ್ಲೂಕಿನ ಡಿ.ಚಿಕ್ಕಗೊಂಡನಹಳ್ಳಿ ಗ್ರಾಮದ ಕಾಳೇಗೌಡ (57) ಮೃತರು. ನ. 24 ರಂದು ಮನೆಯಿಂದ ಹೊರ ಹೋಗಿದ್ದ ಅವರು ರಾತ್ರಿಯಾದರೂ ವಾಪಾಸ್ ಬಾರದ ಹಿನ್ನಲೆಯಲ್ಲಿ ಕುಟುಂಬಸ್ಥರು ಹುಡುಕಾಟ ನಡೆಸಿದ್ದರು. ಹೇಮಾವತಿ ಎಡದಂಡೆ ನಾಲೆ ಸಮೀಪದಲ್ಲಿ ಪಾದರಕ್ಷೆ, ಟವೆಲ್ ಹಾಗು ಜರ್ಕಿನ್ ಪತ್ತೆಯಾಗಿತ್ತು. ಶ್ರವಣಬೆಳಗೊಳ ಠಾಣೆ ಪೊಲೀರು ಹಾಗು ಅಗ್ನಿಶಾಮಕ ದಳ ಸಿಬ್ಬಂದಿ ಹುಡುಕಾಟ ನಡೆಸಿದರೂ ಮೃತದೇಹ ಪತ್ತೆಯಾಗಿರಲಿಲ್ಲ.

ಡಿ.17ರ ಬುಧವಾರ ಶ್ರವಣಬೆಳಗೊಳ ಹೋಬಳಿ ಹೊಸಹಳ್ಳಿ ಗ್ರಾಮದ ಬಳಿ ಹೇಮಾವತಿ ನಾಲೆಯಲ್ಲಿ ಮೃತದೇಹ ಪತ್ತೆಯಾಗಿದೆ. ಮರಣೋತ್ತರ ಪರೀಕ್ಷೆ ಬಳಿಕ ಶವವನ್ನು ಕುಟುಂಬಸ್ಥರಿಗೆ ಹಸ್ತಾಂತರಿಸಲಾಯಿತು.

1 ಎಕರೆ 10 ಗುಂಟೆ ಕೃಷಿ ಭೂಮಿ ಹೊಂದಿದ್ದ ಕಾಳೇಗೌಡ ಭೂಮಿಯನ್ನು ತಮ್ಮ ಹೆಸರಿಗೆ ಮಂಜೂರು ಮಾಡಿಕೊಡುವಂತೆ ಜಿಲ್ಲಾಡಳಿತ, ತಾಲ್ಲೂಕು ಆಡಳಿತಕ್ಕೆ 1982 ರಿಂದ ಅರ್ಜಿ ಸಲ್ಲಿಸಿದ್ದರೂ ಪ್ರಯೋಜನವಾಗಿರಲಿಲ್ಲ ಎನ್ನಲಾಗಿದೆ. ಡಿಂಡಗೂರು ಕೃಷಿ ಪತ್ತಿನ ಸಹಕಾರ ಸಂಘದಲ್ಲಿ 10 ಸಾವಿರ ರೂ., ಗ್ರಾಮೀಣ ಕೂಟದಲ್ಲಿ 1.50 ಲಕ್ಷ ರೂ., ಶ್ರೀ ಸಂತ್ಯಮ್ಮ ಸ್ವಸಹಾಯ ಮಹಿಳಾ ಸಂಘದಲ್ಲಿ 1.50 ಲಕ್ಷ ರೂ., ಸೇರಿ ಹಲವು ಖಾಸಗಿ ಫೈನಾನ್ಸ್‌ನಲ್ಲಿ ಸಾಲ ಮಾಡಿದ್ದರೆಂದು ತಿಳಿದು ಬಂದಿದೆ. ಶ್ರವಣಬೆಳಗೊಳ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಸಚಿವ ಕೃಷ್ಣಬೈರೇಗೌಡ ಅಕ್ರಮ: ಆರೋಪ

• ಪ್ರಜೋದಯ ವರದಿ

**ಬೆಳಗಾವಿ:** ಕೋಲಾರ ಜಿಲ್ಲೆ ನರಸಾಪುರ ಹೋಬಳಿಯ ಗರುಡನಪಾಳ್ಯ ಗ್ರಾಮದಲ್ಲಿ ಕೆರೆ ಮತ್ತು ಸ್ಮಶಾನ ಭೂಮಿಯ ದಾಖಲೆ ತಿದ್ದಿ ಖರಾಬು ಎಂದು ತಮ್ಮ ಹೆಸರಿಗೆ ಮಾಡಿಕೊಳ್ಳುವ ಮೂಲಕ ಕಂದಾಯ ಸಚಿವ ಕೃಷ್ಣಬೈರೇಗೌಡ ಅವರು ಅಕ್ರಮ ಎಸಗಿದ್ದಾರೆ ಎಂದು ಬಿಜೆಪಿ ನಾಯಕರು ಆರೋಪಿಸಿದರು.

ವಿಧಾನಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಮುಖ್ಯ ಸಚೇತಕ ಎನ್. ರವಿಕುಮಾರ್ ಮತ್ತು ಬಿಜೆಪಿ ರಾಜ್ಯ ಕಾರ್ಯದರ್ಶಿ ತಮ್ಮೇಶಗೌಡ ಅವರು ಬುಧವಾರ ಇಲ್ಲಿ ಸುದ್ದಿಗೋಷ್ಠಿ ನಡೆಸಿ ಪೂರಕ ದಾಖಲೆಗಳನ್ನು ಬಿಡುಗಡೆ ಮಾಡಿದರು. ಕೃಷ್ಣಬೈರೇಗೌಡ ಅವರು ಕೂಡಲೇ ತಮ್ಮ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದರು.


ನರಸಾಪುರ ಹೋಬಳಿ ಗರುಡನಪಾಳ್ಯ ಗ್ರಾಮದ 20 ಎಕರೆ 16 ಗುಂಟೆ (ಸರ್ವೆ ಸಂಖ್ಯೆ 46) ಜಮೀನು ಮೂಲ ದಾಖಲೆಯಲ್ಲಿ ಕೆರೆ ಎಂದು ನಮೂದಾಗಿದೆ. ಅದೇ ರೀತಿ ಸರ್ವೆ ಸಂಖ್ಯೆ 47 ರಲ್ಲಿ ಒಂದು ಎಕರೆ ಜಮೀನು ಮೂಲ ದಾಖಲೆಯ ಪ್ರಕಾರ ಸ್ಮಶಾನ ಎಂದು ನಮೂದಾಗಿದೆ. ಆದರೆ, ಕೆರೆ ಮತ್ತು ಸ್ಮಶಾನಕ್ಕೆ ಸೇರಿದ ಒಟ್ಟು 21 ಎಕರೆ 16 ಗುಂಟೆ ಜಮೀನಿನ ದಾಖಲೆಗಳನ್ನು ತಿದ್ದಿ, ಖರಾಬು ಎಂದು ನಕಲಿ ದಾಖಲೆ ಸೃಷ್ಟಿಸಲಾಗಿದೆ. 2001- 02ರಲ್ಲಿ ಈ ಕೃತ್ಯ ನಡೆದಿದೆ.

ಕೃಷ್ಣಬೈರೇಗೌಡ ಮತ್ತು ಅವರ ಕುಟುಂಬದ ಹೆಸರಿಗೆ ಬರೆಸಲಾಗಿದೆ. ಈಗಲೂ ಕೃಷ್ಣಬೈರೇಗೌಡ ಅವರ ಕುಟುಂಬದ ಹೆಸರಿನಲ್ಲಿಯೇ ಇದೆ. ಕಂದಾಯ ಕಾನೂನಿನ ಪ್ರಕಾರ, ಸರ್ಕಾರಿ ಜಮೀನು ಅದರಲ್ಲೂ ಕರೆ, ಸ್ಮಶಾನದ ಜಮೀನುಗಳನ್ನು ಯಾವುದೇ ವ್ಯಕ್ತಿಯ ಹೆಸರಿಗೆ ದಾಖಲೆ ಮಾಡಲು ಸಾಧ್ಯವಿಲ್ಲ. ಈ ಜಮೀನಿನ ಮಾರುಕಟ್ಟೆ ಮೌಲ್ಯ 100 ಕೋಟಿ ರೂ. ಮೀರುತ್ತದೆ. ಸರ್ಕಾರಿ ಜಮೀನನ್ನು ತಮ್ಮ ಹೆಸರಿಗೆ ಮಾಡಿಕೊಂಡಿರುವುದು ಅಕ್ಷಮ್ಯ ಅಪರಾಧವಾಗಿದ್ದು ತನಿಖೆ ನಡೆಸಬೇಕು ಎಂದು ನಾರಾಯಣಸ್ವಾಮಿ ಹೇಳಿದರು.

# ಹದಗೆಟ್ಟ ಹಾನುಬಾಳು ರಸ್ತೆ: ಸಂಚಾರ ದುಸ್ತರ

## ರಾಷ್ಟ್ರೀಯ ಹೆದ್ದಾರಿ ಸಂಪರ್ಕಿಸುವ ಮಾರ್ಗ ದುರಸ್ತಿಗೆ ಸ್ಥಳೀಯ ಒತ್ತಾಯ

• ಪ್ರಜೋದಯ ವರದಿ



**ಸಕಲೇಶಪುರ:** ರಾಷ್ಟ್ರೀಯ ಹೆದ್ದಾರಿ-75 ಸಂಪರ್ಕ ಕಲ್ಪಿಸುವ ತಾಲ್ಲೂಕಿನ ಆನೆಮಹಲ್- ಹಾನುಬಾಳು - ಮೂಡಿಗೆರೆ ಮಾರ್ಗವಾಗಿ ಸಾಗುವ ಪ್ರಮುಖ ರಸ್ತೆ ಗುಂಡಿಗಳಿಂದ ಆವೃತವಾಗಿ ಜನರ ಆಕ್ರೋಶಕ್ಕೆ ಕಾರಣವಾಗಿದೆ.

ಬೆಂಗಳೂರು- ಮಂಗಳೂರು ಸಂಪರ್ಕಿಸುವ ರಾಷ್ಟ್ರೀಯ ಹೆದ್ದಾರಿ-75 ಹಾಗು ಮಂಗಳೂರು-ಕಡೂರು, ಉಡುಪಿ-ವಿಲ್ಲುಪುರಂ ರಾಷ್ಟ್ರೀಯ ಹೆದ್ದಾರಿಗಳನ್ನು ಜೋಡಿಸುವ ಈ ರಸ್ತೆಯು ಹದಗೆಟ್ಟಿರುವುದರಿಂದ ವಾಹನ ಸಂಚಾರ ದುಸ್ತರವಾಗಿದೆ. ಹಾನುಬಾಳು ಹೋಬಳಿ ಕೇಂದ್ರ ತಲುಪಲು ಇದೇ ಮುಖ್ಯರಸ್ತೆಯಾಗಿರುವುದರಿಂದ ಈ ಭಾಗದ ಹೋಂಸ್ಟೇ, ರೆಸಾರ್ಟ್‌ಗಳಿಗೆ ತೆರಳುವ ಪ್ರವಾಸಿಗರಿಗೂ ತೊಂದರೆಯುಂಟಾಗಿದೆ.

ಶಿರಾಡಿಘಾಟ್ ಅಥವಾ ಚಾರ್ಮಾಡಿ ಘಾಟ್ ರಸ್ತೆಯಲ್ಲಿ ಅಪಘಾತ ಅಥವಾ ಮಳೆಗಾಲದಲ್ಲಿ ಭೂಕುಸಿತದಿಂದ ವಾಹನ ಸಂಚಾರ ಅಸ್ತವ್ಯಸ್ತವಾದರೆ, ಆನೆಮಹಲ್-ಹಾನುಬಾಳು-ಮೂಡಿಗೆರೆ ರಸ್ತೆ ಎರಡು ರಾಷ್ಟ್ರೀಯ ಹೆದ್ದಾರಿಗಳಿಗೆ ಪ್ರಮುಖ ಪರ್ಯಾಯ ಸಂಪರ್ಕ ಮಾರ್ಗವಾಗಿದೆ. ಅನಿವಾರ್ಯ ಸಂದರ್ಭಗಳಲ್ಲಿ ಈ ರಸ್ತೆಯಲ್ಲಿ ಹೆಚ್ಚಿನ ವಾಹನ ದಟ್ಟಣೆ ಉಂಟಾಗುತ್ತದೆ. ಆದರೆ ಇಂತಹ ಪ್ರಮುಖ ರಸ್ತೆಯಲ್ಲಿ ದಿನನಿತ್ಯ ಸಂಚರಿಸುವ ಜನರು ಗುಂಡಿಗಳ ಕಾರಣಕ್ಕೆ ಜೀವದ ಹಂಗು ತೊರೆದು ಪ್ರಯಾಣಿಸುವ ಪರಿಸ್ಥಿತಿ ಎದುರಾಗಿದೆ.

ರಸ್ತೆ ತುಂಬೆಲ್ಲಾ ಗುಂಡಿಗಳು, ಮಳೆ ನೀರು ಹರಿಯಲು ಸೂಕ್ತ ಚರಂಡಿ ವ್ಯವಸ್ಥೆಯಿಲ್ಲದೆ ತೀವ್ರ ಸಮಸ್ಯೆ ಎದುರಾಗಿದೆ. ಮಳೆಗಾಲ ಮುಗಿದು ಡಿಸೆಂಬರ್ ಅರ್ಧ ತಿಂಗಳು ಕಳೆದರೂ ಪ್ಯಾಚ್‌ವರ್ಕ್ ಕೂಡ ಆರಂಭವಾಗಿಲ್ಲ. ಸಂಬಂಧಪಟ್ಟ ಇಲಾಖೆ ಇಂಜಿನಿಯರ್‌ಗಳನ್ನು ಪ್ರಶ್ನಿಸಿದರೆ, ಹಣವಿಲ್ಲ, ಅಂದಾಜು ಪಟ್ಟಿ ಕಳುಹಿಸಿದ್ದೇವೆ, ಇನ್ನೂ ಟೆಂಡರ್ ಆಗಿಲ್ಲ, ಏಜೆನ್ಸಿ ಫಿಕ್ಸ್ ಆಗಿಲ್ಲ ಎಂಬ ಉತ್ತರ ನೀಡಲಾಗುತ್ತಿದೆ. ಮೂಡಿಗೆರೆ ತಾಲ್ಲೂಕು ವ್ಯಾಪ್ತಿಯಲ್ಲಿ ರಸ್ತೆ ಗುಂಡಿ ಮುಚ್ಚುವ ನಡೆಯುತ್ತಿರುವಾಗ, ಇಲ್ಲಿ ಮಾತ್ರ ಯಾಕೆ ನಿರ್ಲಕ್ಷ್ಯ ವಹಿಸಲಾಗಿದೆ. ಇದು ಸರ್ಕಾರದ ಇಬ್ಬಗೆ ನೀತಿಯಲ್ಲವೇ ಎಂದು ಸ್ಥಳೀಯರಾದ ಅವರೇಕಾಡು ಪೃಥ್ವಿ ಪ್ರಶ್ನಿಸಿದ್ದಾರೆ.

ಸಂಪೂರ್ಣ ಮರು ಡಾಂಬರೀಕರಣ ಅಗತ್ಯವಿರುವ ಈ ರಸ್ತೆಗೆ ಕನಿಷ್ಠ ಪ್ಯಾಚ್‌ವರ್ಕ್ ಕೂಡ ಮಾಡದಿರುವುದರಿಂದ ವಾಹನಗಳ ಸಂಚಾರಕ್ಕೆ ಸಮಸ್ಯೆ ಎದುರಾಗಿದೆ. ಶೀಘ್ರದಲ್ಲೇ ಗುಂಡಿ ಸಮಸ್ಯೆಗೆ ಪರಿಹಾರ ಒದಗಿಸದಿದ್ದಲ್ಲಿ, ಹಾನುಬಾಳು ಹೋಬಳಿ ವ್ಯಾಪ್ತಿಯ ಎಲ್ಲಾ ಗ್ರಾಮಸ್ಥರು ರಸ್ತೆ ತಡೆ ನಡೆಸಿ, ಪ್ರತಿಭಟನೆ ನಡೆಸಬೇಕಾಗುತ್ತದೆ ಎಂದು ಎಚ್ಚರಿಸಿದ್ದಾರೆ.

## ರೇವಣ್ಣ, ಕುಮಾರಸ್ವಾಮಿ ಹುಟ್ಟುಹಬ್ಬ ಆಚರಣೆ

• ಪ್ರಜೋದಯ ವರದಿ

**ಹಾಸನ:** ಮಾಜಿ ಸಚಿವ ಹೆಚ್.ಡಿ. ರೇವಣ್ಣ ಹಾಗು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರ ಅವರ ಹುಟ್ಟುಹಬ್ಬದ ಅಂಗವಾಗಿ ಬುಧವಾರ ನಗರದಲ್ಲಿ ಜೆಡಿಎಸ್ ಮುಖಂಡರು, ಕಾರ್ಯಕರ್ತರು ದೇವಸ್ಥಾನ, ದರ್ಗಾಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿದರು.

ಮೊದಲಿಗೆ ನಗರದ ನೀರುಬಾಗಿಲು ಆಂಜನೇಯಸ್ವಾಮಿ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಿ, ಪಟಾಕಿ ಸಿಡಿಸಿ ಕೇಕ್ ಕತ್ತರಿಸುವ ಮೂಲಕ ಹುಟ್ಟುಹಬ್ಬವನ್ನು ಆಚರಿಸಲಾಯಿತು. ಬಳಿಕ ದರ್ಗಾಕ್ಕೆ ಭೇಟಿ ನೀಡಿ ಪ್ರಾರ್ಥನೆ ಸಲ್ಲಿಸಿ, ಪರಸ್ಪರ ಸಿಹಿ ಹಂಚುವ ಮೂಲಕ ಸಂಭ್ರಮ ವ್ಯಕ್ತಪಡಿಸಿದರು.

ಈ ವೇಳೆ ಮಹಾನಗರ ಪಾಲಿಕೆ ಮಾಜಿ ಮೇಯರ್ ಗಿರೀಶ್ ಚನ್ನವೀರಪ್ಪ, ಜೆಡಿಎಸ್ ತಾಲ್ಲೂಕು ಅಧ್ಯಕ್ಷ ಎಸ್.ದ್ಯಾವೇಗೌಡ ಅವರು ಮಾತನಾಡಿ, ಜಿಲ್ಲೆಯ ಅಭಿವೃದ್ಧಿಗೆ ಕುಮಾರಸ್ವಾಮಿ ಹಾಗೂ ರೇವಣ್ಣ ಅವರ ಕೊಡುಗೆ ಅಪಾರವಾಗಿದೆ. ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಅವರ ಮಾರ್ಗದರ್ಶನದಲ್ಲಿ ಮುಂದಿನ ದಿನಗಳಲ್ಲಿ ಇನ್ನಷ್ಟು ಉನ್ನತ ರಾಜಕೀಯ ಸ್ಥಾನಮಾನ ಪಡೆದು ರಾಜ್ಯ ಮತ್ತು ದೇಶಕ್ಕೆ ಹೆಚ್ಚಿನ ಕೊಡುಗೆ ನೀಡಲಿ ಎಂದು ಅವರು ಹಾರೈಸಿದರು.

ಮಾಜಿ ಸಚಿವ ಹೆಚ್.ಡಿ.ರೇವಣ್ಣ ಅವರು ತಮ್ಮ ಆಡಳಿತ ಅವಧಿಯಲ್ಲಿ ಕೃಷಿ, ಶಿಕ್ಷಣ, ನೀರಾವರಿ, ಕೈಗಾರಿಕೆ ಸೇರಿ ವಿವಿಧ ಕ್ಷೇತ್ರಗಳಲ್ಲಿ ಹಾಸನ ಜಿಲ್ಲೆಯನ್ನು ಮುಂಚೂಣಿಗೆ ತರುವಲ್ಲಿ ಮಹತ್ವದ ಪಾತ್ರವಹಿಸಿದ್ದಾರೆ. ಹೆಚ್.ಡಿ.ಕುಮಾರಸ್ವಾಮಿ ಅವರು ಮಾಜಿ ಮುಖ್ಯಮಂತ್ರಿ ಹಾಗೂ ಕೇಂದ್ರ ಸಚಿವರಾಗಿ ರಾಜ್ಯ ಮತ್ತು ಕೇಂದ್ರ ಮಟ್ಟದಲ್ಲಿ ಜನಪರ ಯೋಜನೆಗಳನ್ನು ಜಾರಿಗೆ ತಂದು ಜನಮೆಚ್ಚುಗೆ ಪಡೆದಿದ್ದಾರೆ ಎಂದು ಹೇಳಿದರು.

ಜೆ.ಡಿ.ಎಸ್. ಮುಖಂಡರಾದ ಸಿ.ಆರ್.ಶಂಕರ್, ವಾಸುದೇವ್, ಮಂಜೇಗೌಡ, ಲಕ್ಷ್ಮಣ್, ವಕೀಲ ಕೆ.ಆರ್.ಇಂದ್ರಕುಮಾರ್, ಬಿದರೆಕೆರೆ ಜಯರಾಂ, ರಘು ಹೊಂಗೆರೆ, ರುದ್ರ ಕುಮಾರ್, ಹೆಚ್.ಬಿ.ಗೋಪಾಲ್, ಪ್ರೇಮಮ್ಮ ಹಾಜರಿದ್ದರು.

# ಮಕ್ಕಳ ಜ್ಞಾನಾಭಿವೃದ್ಧಿಗೆ ಕಲಿಕಾ ಹಬ್ಬ ಸಹಕಾರಿ

• ಪ್ರಜೋದಯ ವರದಿ

**ಆಲೂರು:** ಮಕ್ಕಳಲ್ಲಿ ಸಂಖ್ಯಾಜ್ಞಾನವನ್ನು ಅಭಿವೃದ್ಧಿಗೊಳಿಸಲು ಕಲಿಕಾ ಹಬ್ಬವನ್ನು ಆಚರಿಸಲಾಗುತ್ತಿದೆ ಎಂದು ಕಸಬಾ ಹೋಬಳಿ ಶಿಕ್ಷಣ ಸಂಯೋಜಕ ಕಿರಣ್‌ಕುಮಾರ್ ತಿಳಿಸಿದರು.

ಕಸಬಾ ಮರಸು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಬುಧವಾರ ಕಸಬಾ ಕ್ಲಸ್ಟರ್ ಮಟ್ಟದ ಎಫ್.ಎಲ್.ಎನ್. ಕಲಿಕಾ ಹಬ್ಬವನ್ನು ಉದ್ಘಾಟಿಸಿ ಮಾತನಾಡಿದ ಅವರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಸಲಹೆಯಂತೆ ಮೂರು ವರ್ಷಗಳಿಂದ ಕಲಿಕಾ ಹಬ್ಬವನ್ನು ಆಚರಿಸಿಕೊಂಡು ಬರಲಾಗುತ್ತಿದೆ. ಕಲಿಕೆಯಲ್ಲಿ ಹಿಂದುಳಿದಿರುವ ಮಕ್ಕಳಿಗೆ ಸಂಖ್ಯಾಜ್ಞಾನದ ಮೂಲಕ ಶಿಕ್ಷಣದ ಅರಿವು ಮೂಡಿಸಲಾಗುತ್ತದೆ ಎಂದು ಮಾಹಿತಿ ನೀಡಿದರು.



ಕ್ಲಸ್ಟರ್ ವ್ಯಾಪ್ತಿಗೊಳಪಡುವ ಎಲ್ಲ ಶಾಲೆಗಳ ವಿದ್ಯಾರ್ಥಿಗಳನ್ನು ಒಂದೆಡೆ ಸೇರಿಸಿ ಮಾಡುವ ಕಾರ್ಯಕ್ರಮವಾಗಿದ್ದು, ವಿನೂತನ ಚಟುವಟಿಕೆಗಳ ಆಧಾರದಲ್ಲಿ ಮಕ್ಕಳಲ್ಲಿ ವಿಶೇಷ ಜ್ಞಾನದ ಅರಿವು ಮೂಡುತ್ತದೆ. ಕಲಿಕಾಹಬ್ಬದ ಸಂದರ್ಭದಲ್ಲಿ ಶಿಕ್ಷಣದ ಜೊತೆಗೆ ಪರಿಕರಗಳ ಸ್ವಚ್ಛತೆ ಮತ್ತು ಮರುಬಳಕೆ ಬಗ್ಗೆಯೂ ಅರಿವು ಮೂಡಿಸಲಾಗುತ್ತದೆ ಎಂದು ಅವರು ಹೇಳಿದರು.

ಗ್ರಾಮಸ್ಥ ಹರೀಶ್ ಅವರು ಮಾತನಾಡಿ, ಕಲಿಕಾ ಹಬ್ಬದ ಮೂಲಕ ಮಕ್ಕಳಲ್ಲಿ ಕಲಿಕೆಯನ್ನು ಪೋಷಿಸುತ್ತಿರುವುದು ಆಶಾದಾಯಕವಾಗಿದೆ. ತಾಲ್ಲೂಕಿನ ರಾಯರಕೊಪ್ಪಲಿನಲ್ಲಿ ಕೆ.ಪಿ.ಎಸ್. ಶಾಲೆ ತೆರೆದಿರುವುದು ಉತ್ತಮ ಬೆಳವಣಿಗೆ. ಅದೇ ರೀತಿ ಹೋಬಳಿಗೊಂದು ಕೆ.ಪಿ.ಎಸ್. ಶಾಲೆ ತೆರೆದು, ವಾಹನಗಳ ಮೂಲಕ ವಿದ್ಯಾರ್ಥಿಗಳನ್ನು ಕರೆತರುವುದರಿಂದ ಸರ್ಕಾರಿ ಶಾಲೆಗಳಲ್ಲಿ ದಾಖಲೆ ಪ್ರಮಾಣ ಹೆಚ್ಚಿಸಬಹುದು. ಇದಕ್ಕೆ ಸರ್ಕಾರ ಪೂರಕ ಸಹಕಾರ ಮಾಡಬೇಕು ಎಂದರು.

ಸಮಾರಂಭದಲ್ಲಿ ಡಯಟ್ ಹಿರಿಯ ಉಪನ್ಯಾಸಕಿ ಗಾಯಿತ್ರಿಬಾಯಿ, ಬಿ.ಆರ್.ಪಿ. ನಿಶಾಖ್‌ಕೌಸರ್. ತಿಮ್ಮಶೆಟ್ಟಿ, ಪರಮೇಶ, ಸಂತೋಷ, ಪುಷ್ಪ, ಕಿರಣ್, ಧರ್ಮ, ಶಿಕ್ಷಕಿ ವೇದಾವತಿ, ರಜಿನಾಮೇರಿ, ಲತಾಮಣಿ, ಲಕ್ಷ್ಮೀಶ, ಸಿ.ಆರ್.ಪಿ. ಮೈಮುನಾ, ಕ್ಲಸ್ಟರ್ ಶಿಕ್ಷಕರು, ಪೋಷಕರು ಮತ್ತು ಎಸ್.ಡಿ.ಎಂ.ಸಿ. ಸದಸ್ಯ ನಿಂಗರಾಜು, ರಾಜಶೇಖರ್, ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಬಿ.ಪಿ.ಎಲ್. ರೇಷನ್ ಕಾರ್ಡ್‌ದಾರರಿಗೆ ಗುಡ್‌ನ್ಯೂಸ್

**ಬೆಳಗಾವಿ:** ಕೇಂದ್ರ ಸರ್ಕಾರದ ಮಾನದಂಡಗಳ ಆಧಾರದ ಮೇಲೆ ಸುಮಾರು 13 ಲಕ್ಷ ಕಾರ್ಡ್‌ಗಳು ಅನರ್ಹ ಕಾರ್ಡಗಳಿದ್ದು, ಇವುಗಳನ್ನು ಎಪಿಎಲ್ ಗೆ ವರ್ಗಾವಣೆ ಮಾಡಿರುವ ಬಗ್ಗೆ ಚರ್ಚೆ ನಡೆಸಿದ್ದು, ರಾಜ್ಯದಲ್ಲಿ ಅರ್ಹ ಫಲಾನುಭವಿಯನ್ನು ಶೀಘ್ರದಲ್ಲಿ ಗುರುತಿಸಬೇಕು ಅನರ್ಹರನ್ನು ಮಾತ್ರ ತಾವು ಎಪಿಎಲ್‌ಗೆ ವರ್ಗಾಯಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ ಎಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವ ಕೆ.ಹೆಚ್. ಮುನಿಯಪ್ಪ ಹೇಳಿದರು.

ಮಾಧ್ಯಮದವರನ್ನು ಉದ್ದೇಶಿಸಿ ಮಾತನಾಡಿ, ಪಡಿತರ ಫಲಾನುಭವಿಗಳು ಕಡ್ಡಾಯವಾಗಿ ತಮ್ಮ ಕಾರ್ಡನ್ನು ಇಕೆವೈಸಿ ಮಾಡಿಸಿ ಎಂದು ತಿಳಿಸಿದರು.

## ಹೋರಾಟಗಾರರ ವಿರುದ್ಧ ಪ್ರಕರಣ ಖಂಡಿಸಿ ಸಭೆ

• ಪ್ರಜೋದಯ ವರದಿ

**ಸಕಲೇಶಪುರ:** ಅರ್ಜುನ ಆನೆ ಸ್ಮಾರಕ ವಿಚಾರದಲ್ಲಿ ಹೋರಾಟ ನಡೆಸಿದ ಹೋರಾಟಗಾರರ ಮೇಲೆ ಪ್ರಕರಣ ದಾಖಲಿಸಿರುವುದನ್ನು ಖಂಡಿಸಿ ಹಾಗೂ ತಾಲ್ಲೂಕಿನಲ್ಲಿ ತೀವ್ರಗೊಳ್ಳುತ್ತಿರುವ ಕಾಡಾನೆ ಸಮಸ್ಯೆ ಕುರಿತು ಚರ್ಚಿಸಲು ಡಿ.18ರಂದು ಬೆಳಿಗ್ಗೆ 11 ಗಂಟೆಗೆ ಪಟ್ಟಣದ ಒಕ್ಕಲಿಗರ ಭವನದಲ್ಲಿ ಸರ್ವಪಕ್ಷ ಸರ್ವ ಸಂಘಟನೆಗಳ ಸಭೆ ಆಯೋಜಿಸಲಾಗಿದೆ ಎಂದು ಪ್ರಗತಿಪರ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ ಮಲ್ನಾಡ್ ಮೆಹಬೂಬ್ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಾಜಿ ಶಾಸಕ ಎಚ್.ಎಂ. ವಿಶ್ವನಾಥ್ ಹಾಗೂ ಊರಿನ ಹಿರಿಯ ಗಣ್ಯರ ಸಮ್ಮುಖದಲ್ಲಿ ನಡೆಯುವ ಈ ಸಭೆಯಲ್ಲಿ ವಿವಿಧ ರಾಜಕೀಯ



ಪಕ್ಷಗಳ ಮುಖಂಡರು, ಸಂಘಟನೆಗಳ ಪ್ರತಿನಿಧಿಗಳು, ರೈತರು, ಪರಿಸರ ಹೋರಾಟಗಾರರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಮನವಿ ಮಾಡಿದರು.

ಅರ್ಜುನ ಆನೆ ಸ್ಮಾರಕವು ಜನಸಾಮಾನ್ಯರ ಭಾವನೆಗಳಿಗೆ ಸಂಬಂಧಿಸಿದ ವಿಷಯವಾಗಿದ್ದು, ಅದರ ಪರವಾಗಿ ಧ್ವನಿ ಎತ್ತಿದ ಹೋರಾಟಗಾರರ ಮೇಲೆ ಪ್ರಕರಣ ದಾಖಲಿಸಿರುವುದು ಪ್ರಜಾಸತ್ತಾತ್ಮಕ ಮೌಲ್ಯಗಳಿಗೆ ವಿರುದ್ಧವಾಗಿದೆ ಎಂಬ ಅಭಿಪ್ರಾಯ ಸಾರ್ವಜನಿಕ ವಲಯದಲ್ಲಿ ವ್ಯಕ್ತವಾಗುತ್ತಿದೆ.

ಈ ಹಿನ್ನೆಲೆಯಲ್ಲಿ ನಡೆಯುವ ಸರ್ವ ಪಕ್ಷಸರ್ವ ಸಂಘಟನೆಗಳ ಸಭೆಯಲ್ಲಿ ಕಾಡಾನೆ ಸಮಸ್ಯೆಗೆ ಶಾಶ್ವತ ಪರಿಹಾರ, ಅರಣ್ಯ ಇಲಾಖೆ ಹಾಗೂ ಆಡಳಿತದ ಜವಾಬ್ದಾರಿ, ಹೋರಾಟಗಾರರ ಮೇಲಿನ ಪ್ರಕರಣ ಹಿಂಪಡೆಯುವ ಕುರಿತು ಸ್ಪಷ್ಟ ನಿರ್ಣಯ ಕೈಗೊಳ್ಳುವ ಬಗ್ಗೆ ಚರ್ಚಿಸಲಾಗುವುದು ಎಂದು ಹೇಳಿದರು.

ಜನಪರ ಹೋರಾಟ ಸಂಘದ ಅಧ್ಯಕ್ಷ ರವಿಕುಮಾರ್, ಕಾರ್ಯನಿರತ ಪತ್ರ ಕರ್ತರ ಸಂಘದ ಅಧ್ಯಕ್ಷ ಜೈಭೀಮ್ ಮಂಜು, ಕನ್ನಡ ಸಾಹಿತ್ಯ ಪರಿಷತ್ ಕಾರ್ಯದರ್ಶಿ ಯೋಗೇಶ್ ಹಾಗೂ ದಯಾನಂದ್ ಇದ್ದರು.

## ಡಿ.23ಕ್ಕೆ ಆಟೋ ಚಾಲಕರ ಸಂಘದ ಚುನಾವಣೆ



• ಪ್ರಜೋದಯ ವರದಿ

**ಸಕಲೇಶಪುರ:** ಮಲೆನಾಡು ಆಟೋ ಚಾಲಕರ ಸಂಘದ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಚುನಾವಣೆಯು ಡಿ.23ರಂದು ಪಟ್ಟಣದ ಎಪಿಎಂಸಿ ಆವರಣದಲ್ಲಿ ನಡೆಯಲಿದೆ ಎಂದು ಚುನಾವಣಾ ಮೇಲ್ವಿಚಾರಣಾ ಸಮಿತಿ ಅಧ್ಯಕ್ಷ ತಮ್ಮಣ್ಣಗೌಡ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚುನಾವಣೆಯು ಡಿ.23 ರಂದು ಬೆಳಿಗ್ಗೆ 9 ಗಂಟೆಯಿಂದ ಮಧ್ಯಾಹ್ನ 3 ರವರೆಗೆ ನಡೆಯಲಿದ್ದು, ಎಪಿಎಂಸಿ ಮಾರುಕಟ್ಟೆ ಆವರಣದಲ್ಲಿ ಮತದಾನಕ್ಕೆ ವ್ಯವಸ್ಥೆ ಮಾಡಲಾಗಿದೆ. ಮತದಾನದ ದಿನವೇ ಫಲಿತಾಂಶ ಘೋಷಣೆ ಮಾಡಲಾಗುವುದು ಎಂದು ತಿಳಿಸಿದರು.

ಮತದಾನಕ್ಕೆ ಅರ್ಹತೆ ಹಾಗೂ ನಿಬಂಧನೆಗಳ ವಿವರಗಳನ್ನು ಅವರು ತಿಳಿಸುತ್ತಾ, ಪ್ರಸ್ತುತ ಚಾಲ್ತಿಯಲ್ಲಿರುವ ಪ್ಯಾಸೆಂಜರ್ ಆಟೋ ಪರವಾನಗಿ ಹೊಂದಿರುವ ಚಾಲಕರಿಗೆ ಮಾತ್ರ ಮತದಾನದ ಹಕ್ಕು ಇರಲಿದೆ ಎಂದರು.

ಚುನಾವಣಾ ಸಮಿತಿ ಸದಸ್ಯರಾದ ಉಪಾಧ್ಯಕ್ಷ ಸೈಯ್ಯದ್ ಫೈರೋಜ್, ಕಾರ್ಯದರ್ಶಿ ಪುಟ್ಟರಾಜು, ವೇದುನಂದನ್ ಬಿ.ಶೆಟ್ಟಿ, ರವಿ, ದೇವರಾಜು, ಛಾಯಾಪತಿ ಉಪಸ್ಥಿತರಿದ್ದರು.

## ಡಾ.ತೃಪ್ತಿದಾಸ್ ಅಂತಾರಾಷ್ಟ್ರೀಯ ಮಟ್ಟದ ಅಪರೂಪದ ಸಾಧನೆ

• ಪ್ರಜೋದಯ ವರದಿ

**ಹಾಸನ:** ವೈದ್ಯ ಡಾ.ದೇವದಾಸು ಹೆಚ್.ಆರ್. (ಆನಂದದಾಸ್ ಡಯಾಗ್ನೋಸ್ಟಿಕ್ ಲ್ಯಾಬ್) ಹಾಗೂ ಡಾ. ಕೆ.ವಿ. ಸುಜಾತಾ (ದಾಸ್ ಸ್ಕ್ಯಾನಿಂಗ್ ಸೆಂಟರ್) ಅವರ ಪುತ್ರಿ ಡಾ. ತೃಪ್ತಿ ದಾಸ್ ಅವರು ಯುರೋಪಿಯನ್ ಡಿಪ್ಲೊಮಾ ಇನ್ ರೇಡಿಯಾಲಜಿ (CBS) ಪರೀಕ್ಷೆಯನ್ನು ಯಶಸ್ವಿಯಾಗಿ ಉತ್ತೀರ್ಣರಾಗುವ ಮೂಲಕ ಜಿಲ್ಲೆಯ ಮೊದಲ ಮಹಿಳಾ ವೈದ್ಯ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ

ಡಾ. ತೃಪ್ತಿ ಅವರು ಯುರೋಪಿಯನ್ ಬೋರ್ಡ್ ಪ್ರಮಾಣಿತ ತಜ್ಞರಾಗಿ ಗುರುತಿಸಲ್ಪಟ್ಟಿದ್ದಾರೆ. ಇದೇ ವೇಳೆ, ಅವರು ಡಯಾಗ್ನೊಸ್ಟಿಕ್ ರೇಡಿಯಾಲಜಿ ಮತ್ತು ಇಂಟರ್ವೆನ್ಶನಲ್ ರೇಡಿಯಾಲಜಿ ಎಂಬ ಎರಡೂ ಕ್ಷೇತ್ರಗಳಲ್ಲಿ ಕೇವಲ ಒಂದು ತಿಂಗಳಲ್ಲಿ ಯುರೋಪಿಯನ್ ಮಟ್ಟದ ಎರಡು ಪ್ರಮಾಣಪತ್ರಗಳನ್ನು ಪಡೆದಿರುವುದು ವಿಶೇಷ ಸಾಧನೆಯಾಗಿದೆ.



MBBS, MD, DNB, FVIR, EBIR, EDiR ಸೇರಿದಂತೆ ಅಂತಾರಾಷ್ಟ್ರೀಯ ಮಟ್ಟದ ಪ್ರತಿಷ್ಠಿತ ಪದವಿಗಳನ್ನು ಗಳಿಸಿರುವ ಅವರು ಪ್ರತಿಭಾವಂತ ರೇಡಿಯಾಲಜಿಸ್ಟ್ ಆಗಿ ಗುರುತಿಸಿಕೊಂಡಿದ್ದಾರೆ. ಈ ರೀತಿ ಸಾಧನೆ ಮಾಡಿದಂತಹ ಬೆರಳೆಣಿಕೆ ಮಂದಿಯಲ್ಲಿ ಇವರು ಕೂಡ ಒಬ್ಬರು

ಮಂಗಳೂರಿನ ಯೆನೆಪೋಯ ವೈದ್ಯಕೀಯ ಕಾಲೇಜಿನಲ್ಲಿ ಎಂಬಿಬಿಎಸ್ ಶಿಕ್ಷಣ ಪೂರ್ಣಗೊಳಿಸಿದ ಡಾ. ತೃಪ್ತಿ ದಾಸ್ ಅವರು ನಾಲ್ಕೂ ವರ್ಷಗಳಲ್ಲಿ ಡಿಸ್ಟಿಂಕ್ಷನ್ ಸಾಧಿಸುವುದರ ಜೊತೆಗೆ ವಿಶ್ವವಿದ್ಯಾಲಯ ಮಟ್ಟದಲ್ಲಿ ಅಗ್ರ ಶ್ರೇಣಿಯ ರ್‍ಯಾಂಕ್ ಪಡೆದು ಗಮನ ಸೆಳೆದಿದ್ದರು. ನಂತರ ದಾವಣಗೆರೆಯ ಜೆಜೆಎಂ ವೈದ್ಯಕೀಯ ಕಾಲೇಜಿನಲ್ಲಿ ರೇಡಿಯಾಲಜಿಯಲ್ಲಿ ಎಂಡಿ ಪದವಿ ಪಡೆದ ಅವರು, ಕಾಲೇಜಿಗೆ ಚಿನ್ನದ ಪದಕವನ್ನು ಗಳಿಸಿದ್ದು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯಕ್ಕೆ 4ನೇ ರ್‍ಯಾಂಕ್ ಪಡೆಯುವ ಮೂಲಕ ತಮ್ಮ ಶೈಕ್ಷಣಿಕ ಸಾಮರ್ಥ್ಯವನ್ನು ಮತ್ತೊಮ್ಮೆ ಸಾಬೀತುಪಡಿಸಿದರು. ಇದಲ್ಲದೆ ರೇಡಿಯಾಲಜಿಯಲ್ಲಿ ಡಿಪ್ಲೊಮೇಟ್ ಆಫ್ ನ್ಯಾಷನಲ್ ಬೋರ್ಡ್ ಪದವಿಯನ್ನೂ ಅವರು ಯಶಸ್ವಿಯಾಗಿ ಪೂರ್ಣಗೊಳಿಸುವ ಮೂಲಕ ಹಲವು ಯುವ ವೈದ್ಯರಿಗೆ ಪ್ರೇರಣೆಯಾಗಿದ್ದಾರೆ.

ಇಂಟರ್ವೆನ್ಷನಲ್ ರೇಡಿಯಾಲಜಿ ಕ್ಷೇತ್ರದಲ್ಲಿ ವಿಶೇಷ ಆಸಕ್ತಿ ಹೊಂದಿರುವ ಡಾ. ತೃಪ್ತಿ ದಾಸ್ ಅವರು 2023 ರಿಂದ 2025ರವರೆಗೆ ಬೆಂಗಳೂರಿನ ಮಣಿಪಾಲ್ ಆಸ್ಪತ್ರೆಯಲ್ಲಿ (ಫೆಲೋಶಿಪ್ ಇನ್ ವಾಸ್ಕುಲರ್ ಅಂಡ್ ಇಂಟರ್ವೆನ್ಷನಲ್ ರೇಡಿಯಾಲಜಿ) ತರಬೇತಿ ಪೂರ್ಣಗೊಳಿಸಿದ್ದಾರೆ. ಕೇವಲ ಒಂದೇ ತಿಂಗಳ ಅವಧಿಯಲ್ಲಿ ಯುರೋಪಿನ ಎರಡು ಅತ್ಯಂತ ಪ್ರತಿಷ್ಠಿತ ಮತ್ತು ಕಠಿಣವೆಂದು ಪರಿಗಣಿಸಲ್ಪಡುವ ಪದವಿಗಳಾದ ಯುರೋಪಿಯನ್ ಡಿಪ್ಲೊಮಾ ಇನ್ ರೇಡಿಯಾಲಜಿ ಹಾಗೂ ಯುರೋಪಿಯನ್ ಬೋರ್ಡ್ ಆಫ್ ಇಂಟರ್ವೆನ್ಷನಲ್ ರೇಡಿಯಾಲಜಿ ಗಳಿಸುವ ಮೂಲಕ ಅಪರೂಪದ ಸಾಧನೆ ಮಾಡಿದ್ದಾರೆ. ಈ ಪ್ರಮಾಣಪತ್ರಗಳನ್ನು ಪಡೆದಿರುವ ಭಾರತದ ಕೆಲವೇ ಕೆಲವು ಮಹಿಳಾ ರೇಡಿಯಾಲಜಿಸ್ಟ್‌ಗಳಲ್ಲಿ ಡಾ. ತೃಪ್ತಿ ದಾಸ್ ಒಬ್ಬರಾಗಿದ್ದಾರೆ.

ಪ್ರಸ್ತುತ ಡಾ. ತೃಪ್ತಿ ದಾಸ್ ಅವರು ಬೆಂಗಳೂರಿನ ಪೀಪಲ್ ಟ್ರೀ ಆಸ್ಪತ್ರೆಯಲ್ಲಿ ಪೂರ್ಣಕಾಲಿಕ ಕನ್ಸಲ್ಟೆಂಟ್ ಆಗಿ ಸೇವೆ ಸಲ್ಲಿಸುತ್ತಿದ್ದು, ಅಲ್ಲಿನ ಇಂಟರ್ವೆನ್ಷನಲ್ ರೇಡಿಯಾಲಜಿ ವಿಭಾಗದ ಮುಖ್ಯಸ್ಥರಾಗಿದ್ದಾರೆ.

## ಡಿ.ಮಂಜುಳಾಗೆ ಶಿಕ್ಷಣ ಸೇವಾ ರತ್ನ ಪ್ರಶಸ್ತಿ



• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಬೆಂಗಳೂರಿನ ಗಾಂಧಿ ಭವನದಲ್ಲಿ ರಾಷ್ಟ್ರೀಯ ಮಾನವ ಹಕ್ಕುಗಳ ತನಿಖಾ ಸಮಿತಿ ವತಿಯಿಂದ ವಿಶ್ವಮಾನವ ಹಕ್ಕುಗಳ ದಿನಾಚರಣೆ ಪ್ರಯುಕ್ತ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ತಾಲ್ಲೂಕಿನ ಕನುವನಘಟ್ಟ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಮುಖ್ಯಶಿಕ್ಷಕಿ ಡಿ.ಮಂಜುಳಾ ಅವರಿಗೆ ರಾಜ್ಯ ಶಿಕ್ಷಣ ಸೇವಾ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಸರ್ಕಾರಿ ಶಾಲೆಯ ವಿದ್ಯಾರ್ಥಿಗಳಿಗೆ ಭೌತಿಕ ಸೌಲಭ್ಯ ಉತ್ತಮಪಡಿಸುವಲ್ಲಿ ಹಾಗೂ ಮಕ್ಕಳ ಸೃಜನಶೀಲತೆಯನ್ನು ಪ್ರೇರೇಪಿಸುವಲ್ಲಿ ವಿಶೇಷ ಪಾಲ್ಗೊಳ್ಳುವಿಕೆಯನ್ನು ಗುರುತಿಸಿ ಈ ಪ್ರಶಸ್ತಿಯನ್ನು ನೀಡಲಾಗಿದೆ.

ರಾಷ್ಟ್ರೀಯ ಮಾನವ ಹಕ್ಕುಗಳ ತನಿಕಾ ಸಮಿತಿಯ ಸಂಸ್ಥಾಪಕ ಅಧ್ಯಕ್ಷ ಕೆ.ಸಂತೋಷ್, ಕರ್ನಾಟಕ ಹೈಕೋರ್ಟ್‌ನ ನಿವೃತ್ತ ನ್ಯಾಯಾಧೀಶ ಎಂ.ಎಸ್. ಶಂಕರಗುಳ್ಳಿ, ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ಆಯೋಗದ ಸದಸ್ಯ ಡಾ.ತಿಪ್ಪೇಸ್ವಾಮಿ ಕೆ.ಟಿ. ಸೇರಿದಂತೆ ಇನ್ನಿತರರು ಹಾಜರಿದ್ದರು.

## ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿಗೆ ಅರ್ಜಿ ಆಹ್ವಾನ

**ಹಾಸನ:** ಮಹಿಳಾ ಅಭಿವೃದ್ಧಿ ಕ್ಷೇತ್ರದಲ್ಲಿ ಐದು ವರ್ಷಗಳಿಂದ ಆದರ್ಶವಾಗಿ ಸೇವೆ ಸಲ್ಲಿಸುತ್ತಿರುವ ವ್ಯಕ್ತಿ ಹಾಗೂ ಸಂಸ್ಥೆಗಳಿಗೆ ಕ್ರೀಡೆ, ಕಲೆ, ಸಾಹಿತ್ಯ ಹಾಗೂ ಶಿಕ್ಷಣ ಕ್ಷೇತ್ರಗಳಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿರುವ ಮಹಿಳೆ ಯರಿಗೆ ತಲಾ ಒಂದರಂತೆ ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿಯನ್ನು ಪ್ರತಿ ವರ್ಷ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯಂದು ನೀಡಲಾಗುತ್ತಿದೆ. (18 ರಿಂದ 45ರ ವಯೋಮಿತಿಯೊಳಗಿನ) ಪ್ರಶಸ್ತಿನೀಡಲಾಗುವುದು.

ಪ್ರಶಸ್ತಿಗಾಗಿ ನಿರ್ದಿಷ್ಟಪಡಿಸಿದ ಅರ್ಜಿ ನಮೂನೆಯನ್ನು ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕೆ.ಆರ್. ಪುರಂ, ಹಾಸನ ಇವರಿಂದ ಪಡೆಯುವುದು. ಸಂಖ್ಯೆ: 08172- 267218 ಅನ್ನು ಸಂಪರ್ಕಿಸಬಹುದಾಗಿದೆ.

## ರಾಷ್ಟ್ರ -ಧರ್ಮ ರಕ್ಷಣೆಗಾಗಿ ಸತ್ಸಂಗ

• ಪ್ರಜೋದಯ ವರದಿ

**ಹಾಸನ:** ಧರ್ಮ ಮತ್ತು ರಾಷ್ಟ್ರದ ಮೇಲೆ ಸಂಕಟ ಬಂದಾಗ ಗುರು ಶಿಷ್ಯ ಪರಂಪರೆಯು ರಾಷ್ಟ್ರ ರಕ್ಷಣೆ, ಧರ್ಮ ರಕ್ಷಣೆಯ ಕಾರ್ಯವನ್ನು ಮಾಡಿದೆ. ಇತ್ತೀಚೆಗೆ ರಾಷ್ಟ್ರದ ಮತ್ತು ಧರ್ಮದ ಮೇಲೆ ಅನೇಕ ಸಂಕಟಗಳು ಎರಗಿದೆ. ಈಗ ಪುನಃ ಸಂತಮಹಾತ್ಮರ ಮಾರ್ಗದರ್ಶನವನ್ನು ಪಡೆದು ರಾಷ್ಟ್ರ ರಕ್ಷಣೆಯ ಕಾರ್ಯವನ್ನು ಮಾಡಬೇಕಾಗಿದೆ.

ಹಾಗಾಗಿ ಹಿಂದೂ ಜನಜಾಗೃತಿ ಸಮಿತಿಯ ವತಿಯಿಂದ ಹಿಂದೂ ಧರ್ಮದ ಜಾಗೃತಿ, ಧರ್ಮಾಚರಣೆ, ರಾಷ್ಟ್ರ ರಕ್ಷಣೆ ಮತ್ತು ಆಧ್ಯಾತ್ಮಿಕ ಸಾಧನೆಯ ಮಹತ್ವ ಈ ವಿಷಯದ ಕುರಿತು ಸನಾತನ ಸಂಸ್ಥೆಯ ಧರ್ಮಪ್ರಚಾರಕ ಸಂತರಾದ ಪೂಜನೀಯ ರಮಾನಂದಗೌಡ ಅವರ ವಿಶೇಷ ಸತ್ಸಂಗದ ಆಯೋಜನೆ ಮಾಡಲಾಗಿದೆ. ಪ್ರಸ್ತುತ ಕಾಲದ ಸವಾಲುಗಳನ್ನು ಎದುರಿಸಲು ಸಂತ-ಮಹಾತ್ಮರ ಮಾರ್ಗದರ್ಶನವನ್ನು ಪುನಃ ಪಡೆಯುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮವನ್ನು ಡಿ.19 ರಂದು ಶುಕ್ರವಾರ ಸಂಜೆ 6 ರಿಂದ 8 ರವರೆಗೆ ನಗರದಲ್ಲಿರುವ ನೀಲಕಂಠೇಶ್ವರ ಸಮುದಾಯ ಭವನ (ಕುರುಹಿನ ಶೆಟ್ಟಿ ಸಭಾಗೃಹ), ರಂಗೋಲಿ ಹಳ್ಳ ಇಲ್ಲಿ ಆಯೋಜನೆ ಮಾಡಲಾಗಿದೆ.

ಹಿಂದೂ ಧರ್ಮದ ಕುರಿತು ಜಾಗೃತಿ ಮತ್ತು ರಾಷ್ಟ್ರೀಯ ಕರ್ತವ್ಯಗಳ ಬಗ್ಗೆ ಮಾರ್ಗದರ್ಶನ ಪಡೆಯಲು ಸಾರ್ವಜನಿಕರು ಈ ಸತ್ಸಂಗದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕೆಂದು ಹಿಂದೂ ಜನಜಾಗೃತಿ ಸಮಿತಿ ಪ್ರಕಟಣೆಯಲ್ಲಿ ವಿನಂತಿಸಿದೆ.

# ಕೆ.ಆರ್.ಕೃಷ್ಣಮೂರ್ತಿ ಕಲಸಿಂದ ಪಿಎಸಿಸಿಎಸ್ ಅಧ್ಯಕ್ಷ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ತಾಲ್ಲೂಕಿನ ಕಲಸಿಂದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಸ್ಥಾನಕ್ಕೆ ಬುಧವಾರ ನಡೆದ ಚುನಾವಣೆಯಲ್ಲಿ ಕಲಸಿಂದ ಗ್ರಾಮದ ನಿರ್ದೇಶಕ ಜೆಡಿಎಸ್ ಬೆಂಬಲಿತರಾದ ಕೆ.ಆರ್.ಕೃಷ್ಣಮೂರ್ತಿ ಅವರು ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾದರು.

ಕಲಸಿಂದ ಪ್ರಾಥಮಿಕ ಕೃಷಿಪತ್ತಿನ ಸಹಕಾರ ಸಂಘದ ಹಿಂದಿನ ಅಧ್ಯಕ್ಷರಾಗಿದ್ದ ಬಿ.ಎನ್.ಸ್ವಾಮಿಯವರು ತಮ್ಮ ಸ್ಥಾನಕ್ಕೆ ರಾಜಿನಾಮೆ ಸಲ್ಲಿಸಿದ ಕಾರಣ, ತೆರವಾಗಿದ್ದ ಅಧ್ಯಕ್ಷ ಸ್ಥಾನಕ್ಕೆ ಸಹಕಾರ ಇಲಾಖೆಯು ಬುಧವಾರ ಚುನಾವಣೆ ನಿಗದಿಗೊಳಿಸಿತ್ತು. ಅಧ್ಯಕ್ಷ ಸ್ಥಾನಕ್ಕೆ ಕಲಸಿಂದ ಕ್ಷೇತ್ರದಿಂದ ನಿರ್ದೇಶಕನಾಗಿ ಆಯ್ಕೆಯಾಗಿದ್ದ ಕೆ.ಆರ್.



ಕೃಷ್ಣಮೂರ್ತಿ ಹೊರತುಪಡಿಸಿ ಮತ್ಯಾರು ನಾಮಪತ್ರ ಸಲ್ಲಿಸದ ಕಾರಣ ಚುನಾವಣಾಧಿಕಾರಿಯಾಗಿದ್ದ ಸಹಕಾರ ಇಲಾಖೆ ಅಧಿಕಾರಿ ಬಿ.ಕೆ.ವಿಜಯೇಂದ್ರ ಅವರು ಕೆ.ಆರ್.ಕೃಷ್ಣಮೂರ್ತಿಯ ಅಯ್ಕೆಯನ್ನು ಘೋಷಿಸಿದರು.

ನೂತನ ಅಧ್ಯಕ್ಷರನ್ನು ರಾಜ್ಯ ಮಾರಾಟ ಮಹಾಮಂಡಳದ ನಿರ್ದೇಶಕ ಸಿ.ಎನ್.ಪುಟ್ಟಸ್ವಾಮಿಗೌಡ ಅವರು ಅಭಿನಂದಿಸಿ ಮಾತನಾಡಿ, ಕಳೆದ ಸಾಲಿನಲ್ಲಿ ಸೇವೆ ಸಲ್ಲಿಸಿದ ಅಧ್ಯಕ್ಷರುಗಳು ಸೊಸೈಟಿಯ ಅಭಿವೃದ್ಧಿಗೆ ಗಣನೀಯ ಸಾಧನೆ ಮಾಡಿದ್ದು, ಸಹಕಾರಿ ಸಂಸ್ಥೆಗಳು ಸಹಕಾರ ತತ್ವದಡಿ ಕಾರ್ಯ ನಿರ್ವಹಿಸಿದಾಗ ಸಹಕಾರ ಸಂಸ್ಥೆಗಳು ಉನ್ನತಿಕರಣಗೊಳ್ಳಲು ಸಾಧ್ಯ, ಸೊಸೈಟಿ ಆರ್ಥಿಕವಾಗಿ ಸದೃಢವಾಗಿ ಬೆಳೆದಿದೆ. ಸಂಘದಡಿ 6.24 ಕೋಟಿ ರೂ. ಕೆಸಿಸಿ ಸಾಲ ನೀಡಲಾಗಿದೆ, ಸ್ತ್ರೀಶಕ್ತಿ ಸಂಘಗಳಿಗೆ 11 ಲಕ್ಷ ರೂ. ಸಾಲ ನೀಡುವುದರ ಜೊತೆಗೆ 2025-26ನೇ ಸಾಲಿಗೆ ಸೊಸೈಟಿಯು 1.23 ಲಕ್ಷ ರೂ ನಿವ್ವಳ ಲಾಭ ದಾಖಲಿಸಿದೆ. ಇಷ್ಟು ದೊಡ್ಡ ಮಟ್ಟದ ಸಾಲ ನೀಡಲು ಶಾಸಕ ಸಿ.ಎನ್.ಬಾಲಕೃಷ್ಣ ಅವರು 25 ವರ್ಷಗಳಿಂದ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್‌ನ ಅಧ್ಯಕ್ಷರಾಗಿ, ನಿರ್ದೇಶಕರಾಗಿ ಕಾರ್ಯ ನಿರ್ವಹಿಸಿರುವುದು ನಮಗೆ ವರದಾನವಾಗಿದೆ. ಅಧಿಕ ಲಾಭದ ನಿರೀಕ್ಷೆ ಹೊಂದದೇ ಸಹಕಾರ ರಂಗದಲ್ಲಿ ಹೆಚ್ಚಿನ ಆಸಕ್ತಿ ವಹಿಸಿ ಕೃಷಿ ಉತ್ತೇಜನಕ್ಕೆ ಯೋಜನೆಗಳನ್ನು ರೂಪಿಸಬೇಕು. ಗ್ರಾಹಕರಿಗೆ, ರೈತರಿಗೆ ಹತ್ತಿರವಾಗಿ ಸೇವೆ ಸಲ್ಲಿಸುವಲ್ಲಿ ಮುಂದಾಗುವಂತೆ ತಿಳಿಸಿದರು.

ಕೆ.ಆರ್.ಕೃಷ್ಣಮೂರ್ತಿ ಮಾತನಾಡಿ, ಕಲಸಿಂದ ಕೃಷಿಪತ್ತಿನ ಸಹಕಾರ ಸಂಘಕ್ಕೆ ಹಿಂದೆ ಅಧ್ಯಕ್ಷರಾಗಿದ್ದವರೆಲ್ಲ ಸಂಘವನ್ನು ಅಭಿವೃದ್ಧಿಯತ್ತ ಮುನ್ನೆಡೆಸಿದ್ದಾರೆ. ಅವರೆಲ್ಲರ ಮಾರ್ಗದರ್ಶನ, ಸಲಹೆ ಪಡೆದು ಸಂಘವನ್ನು ನಡೆಸಿಕೊಂಡು ಹೋಗುವುದಾಗಿ ಹೇಳಿದರು.

ಸೊಸೈಟಿಯ ಉಪಾಧ್ಯಕ್ಷೆ ಜಯಲಕ್ಷ್ಮಿ, ಮಾಜಿ ಅಧ್ಯಕ್ಷ ಬಿ.ಎನ್.ಸ್ವಾಮಿ, ನಿರ್ದೇಶಕರಾದ ಕಲಸಿಂದ ಶಿವರಾಜ್, ಜಿ.ಆರ್.ಉಮೇಶ್, ತಿಮ್ಮೇಗೌಡ, ವಡ್ಡರಹಳ್ಳಿ ಮೋಹನ್‌ಕುಮಾರ್, ಜಿ.ಎಲ್.ನಾಗೇಶ್, ರತ್ನ, ಹರೀಶ್, ಮುನಿಸ್ವಾಮಿ, ದಿಂಡಗೂರು ಗೋವಿಂದರಾಜ್, ಮಂಜು ಹಾಜರಿದ್ದರು.

## ಉಚಿತ ಮತ್ತು ಕಡ್ಡಾಯ ಶಿಕ್ಷಣ ಮಗುವಿನ ಹಕ್ಕು | ಅದನ್ನು ಮಗುವಿಗೆ ದೊರಕಿಸುವುದು ನಾಗರೀಕನ ಕರ್ತವ್ಯ

# ಮಕ್ಕಳು- ಕಿಶೋರರನ್ನು ಕೆಲಸಕ್ಕೆ ನೇಮಿಸಿಕೊಳ್ಳುವುದು ಅಪರಾಧ

• ಪ್ರಜೋದಯ ವರದಿ

**ಹಾಸನ:** ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆಯ ಕಾರ್ಮಿಕ ಪದ್ಧತಿಯು ಮಕ್ಕಳನ್ನು ದೈಹಿಕವಾಗಿ, ನೈತಿಕವಾಗಿ, ಮಾನಸಿಕವಾಗಿ ಹಾಗೂ ಆರ್ಥಿಕವಾಗಿ ಶೋಷಣೆಗೆ ಒಳಪಡಿಸಿ ಅವರ ಶಿಕ್ಷಣ ಹಾಗೂ ಸರ್ವಾಂಗೀಣ ಪ್ರಗತಿಯ ಅವಕಾಶಗಳನ್ನು ತಡೆಗಟ್ಟುತ್ತದೆ. ಶಿಕ್ಷಣ ವಂಚಿತ ಹಾಗೂ ದುಡಿಮೆಯಲ್ಲಿ ತೊಡಗಿರುವ ಈ ಮಕ್ಕಳನ್ನು ರಾಷ್ಟ್ರದ ಮುಖ್ಯವಾಹಿನಿಗೆ ಕರೆತರಲು ಸರ್ಕಾರ, ಸರ್ಕಾರೇತರ ಸಂಸ್ಥೆಗಳು ಹಾಗೂ ಸಾರ್ವಜನಿಕರು ಸಂಘಟಿತರಾಗಿ ಪ್ರಯತ್ನಿಸಬೇಕಾಗಿದೆ.

ಉಚಿತ ಮತ್ತು ಕಡ್ಡಾಯ ಶಿಕ್ಷಣ ಪ್ರತಿ ಮಗುವಿನ ಹಕ್ಕು ಹಾಗೂ ಅದನ್ನು ಪ್ರತಿ ಮಗುವಿಗೆ ದೊರಕಿಸುವುದು ಪ್ರತಿ ನಾಗರೀಕನ ಕರ್ತವ್ಯವಾಗಿರುತ್ತದೆ. ಬಾಲ್ಯಾವಸ್ಥೆಯ ಹಾಗೂ ಕಿಶೋರಾವಸ್ಥೆ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986ರ ಪ್ರಮುಖ ಪ್ರಾವಧಾನಗಳು.

ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆಯ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986 ತಿದ್ದುಪಡಿ ಕಾಯ್ದೆ 2016 ಅನ್ವಯ ಎಲ್ಲಾ ಉದ್ಯೋಗ ಮತ್ತು ಪ್ರಕ್ರಿಯೆಗಳಲ್ಲಿ 14 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳನ್ನು ಕೆಲಸಕ್ಕೆ ನಿಯೋಜಿಸಿಕೊಳ್ಳುವುದು ಹಾಗೂ 18 ವರ್ಷದೊಳಗಿನ ಕಿಶೋರರನ್ನು ಅಪಾಯಕಾರಿ ಉದ್ದಿಮೆಗಳಲ್ಲಿ ಕೆಲಸಕ್ಕೆ ನೇಮಿಸಿಕೊಳ್ಳುವುದು ಶಿಕ್ಷಾರ್ಹ ಹಾಗೂ ಸಂಜ್ಞೆಯ (ವಾರೆಂಟ್‌ರಹಿತ ಬಂಧಿಸಬಹುದಾದ) ಅಪರಾಧವಾಗಿದೆ.

ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆಯ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986ರಂತೆ ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆಯ ಕಾರ್ಮಿಕರನ್ನು ಕೆಲಸಕ್ಕೆ



ನಿಯೋಜಿಸಿಕೊಂಡಲ್ಲಿ ಅಂತಹ ಮೊದಲ ಅಪರಾಧಕ್ಕೆ ಮಾಲೀಕರಿಗೆ 6 ತಿಂಗಳಿಂದ 2 ವರ್ಷಗಳವರೆಗೆ ಜೈಲು ಶಿಕ್ಷೆ ಅಥವಾ ರೂ.20,000 ರಿಂದ 50,000 ರೂ.ವರೆಗೆ ದಂಡ ಅಥವಾ ಎರಡನ್ನು ವಿಧಿಸಲು ಅವಕಾಶವಿರುತ್ತದೆ.

ಪುನರಾವರ್ತಿತ ಅಪರಾಧಕ್ಕೆ 1 ವರ್ಷದಿಂದ 3 ವರ್ಷಗಳವರೆಗೆ ಜೈಲು ಶಿಕ್ಷೆ ವಿಧಿಸಲು ಅವಕಾಶವಿರುತ್ತದೆ. ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆ ಕಾರ್ಮಿಕ ಪದ್ಧತಿಯನ್ನು ಪ್ರೋತ್ಸಾಹಿಸುವ ಪೋಷಕರಿಗೂ ಸಹ ಲಘು ಶಿಕ್ಷಾ ಪ್ರಾವಧಾನವಿದ್ದು, ಪುನರಾವರ್ತಿತ ಅಪರಾಧಕ್ಕೆ ರೂ.10,000 ಗಳ ದಂಡವನ್ನು ವಿಧಿಸಬಹುದಾಗಿರುತ್ತದೆ.

ಗೌರವಾನ್ವಿತ ಭಾರತದ ಸರ್ವೋಚ್ಚ ನ್ಯಾಯಾಲಯವು ರಿಟ್ ಅರ್ಜಿ (ಸಿವಿಲ್) ಸಂಖ್ಯೆ 465/1986 ರಲ್ಲಿ ನೀಡಿರುವ ನಿರ್ದೇಶನದನ್ವಯ ತಪ್ಪಿತಸ್ಥ ಮಾಲೀಕರು ತಾವು ನಿಯೋಜಿಸಿಕೊಂಡ ಪ್ರತಿ ಮಗುವಿಗೆ 20,000 ರೂ.ಗಳನ್ನು ಮಕ್ಕಳ ಪುನರ್ವಸತಿಗೆ ರಚಿಸಲಾದ ಕಲ್ಯಾಣ ನಿಧಿಗೆ ಪಾವತಿಸಬೇಕಾಗಿರುತ್ತದೆ.

ಉಚಿತ ಮತ್ತು ಕಡ್ಡಾಯ ಶಿಕ್ಷಣ ಪ್ರತಿ ಮಗುವಿನ ಹಕ್ಕು ಹಾಗೂ ಅದನ್ನು ಪ್ರತಿ ಮಗುವಿಗೆ ದೊರಕಿಸುವುದು ಪ್ರತಿ ನಾಗರೀಕನ ಕರ್ತವ್ಯವಾಗಿರುತ್ತದೆ. 14 ವರ್ಷದೊಳಗಿನ ಮಕ್ಕಳು ಯಾವುದೇ ಉದ್ಯೋಗ ಅಥವಾ ಪ್ರಕ್ರಿಯೆಗಳಲ್ಲಿ ಹಾಗೂ 14- 18 ವರ್ಷ ವಯಸ್ಸಿನವರೆಗಿನ ಕಿಶೋರರು ಅಪಾಯಕಾರಿ ಉದ್ದಿಮೆಗಳಲ್ಲಿ ಕೆಲಸ ಮಾಡುವುದು ಕಂಡು ಬಂದಲ್ಲಿ ತಕ್ಷಣವೇ ಮಕ್ಕಳ ಸಹಾಯ ವಾಣಿ ಸಂಖ್ಯೆ 1098 ಮತ್ತು ಕಾರ್ಮಿಕ ಇಲಾಖೆ ಸಹಾಯವಾಣಿ ಸಂಖ್ಯೆ 155214 ದೂರು ನೀಡುವಂತೆ ಕಾರ್ಮಿಕ ಅಧಿಕಾರಿ ಹಾಗೂ ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸೊಸೈಟಿಯ ಸದಸ್ಯ ಕಾರ್ಯದರ್ಶಿ ತಿಳಿಸಿದ್ದಾರೆ.

## ಪಲ್ಸ್ ಪೋಲಿಯೊ ಲಸಿಕೆಗೆ ಸಹಕರಿಸಿ



• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಐದು ವರ್ಷದೊಳಗಿನ ಎಲ್ಲಾ ಮಕ್ಕಳು ಪಲ್ಸ್ ಪೋಲಿಯೊ ಲಸಿಕೆಯಿಂದ ವಂಚಿತರಾಗದಂತೆ ಸಿಬ್ಬಂದಿಗಳು ಕಾರ್ಯ ನಿರ್ವಹಿಸಬೇಕು ಎಂದು ತೋಟಿ ಪ್ರಾಥಮಿಕ ಆರೋಗ್ಯ ಕೇಂದ್ರ ಡಾ.ಶಂಕರಲಿಂಗೇಗೌಡ ಹೇಳಿದರು.

ತಾಲ್ಲೂಕಿನ ಹಿರೀಸಾವೆ ಸರ್ಕಾರಿ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಪಲ್ಸ್ ಪೋಲಿಯೊ ಲಸಿಕೆ ಹಾಕುವ ಸಿಬ್ಬಂದಿಗಳಿಗೆ ಏರ್ಪಡಿಸಿದ್ದ ತರಬೇತಿ ಶಿಬಿರದಲ್ಲಿ ಅವರು ಮಾತನಾಡಿ, ಡಿ.21ರ ಭಾನುವಾರ ಎಲ್ಲಾ ಕಡೆ ಲಸಿಕಾ ಬೂತ್‌ಗಳಿಗೆ ಪೋಷಕರು ತಮ್ಮ ಮಕ್ಕಳನ್ನು ಕರೆದುಕೊಂಡು ಬಂದು ಲಸಿಕೆ ಹಾಕಿಸಿ. ಮಾರನೆಯ ದಿನ ಲಸಿಕಾ ಸಿಬ್ಬಂದಿಗಳು ಮನೆ, ಮನೆಗೆ ಭೇಟಿ ನೀಡಿ, ಪ್ರತಿ ಮಗುವು ಲಸಿಕೆ ಹಾಕಿಸಿಕೊಂಡಿರುವುದನ್ನು ಖಾತ್ರಿ ಪಡಿಸಿಕೊಳ್ಳಬೇಕು. ಆ ಸಮಯದಲ್ಲಿ ಲಸಿಕೆಯಿಂದ ವಂಚಿತರಾಗಿದ್ದ ಮಗುವು ಪತ್ತೆಯಾದರೆ ತಕ್ಷಣ ಲಸಿಕೆ ಹಾಕುವಂತೆ ಸೂಚಿಸಿದರು.

ಜುಟ್ಟನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರ, ಡಾ.ಭರತ್ ಅವರು ಮಾತನಾಡಿ, ಪೋಲಿಯೋ ಮುಕ್ತ ಭಾರತ ಅಗುವುದಕ್ಕೆ ಎಲ್ಲರೂ ಸಹಕಾರ ಅಗತ್ಯ, ಸಾರ್ವಜನಿಕರು ಆರೋಗ್ಯ ಇಲಾಖೆಯೊಂದಿಗೆ ಸಹಕರಿಸಿ ಎಂದು ಅವರು ತಿಳಿಸಿದರು.

ಆರೋಗ್ಯ ಇಲಾಖೆಯ ಹಿರಿಯ ಆರೋಗ್ಯ ನಿರೀಕ್ಷಕ ಶಂಕರೇಗೌಡ, ಆರೋಗ್ಯ ಕಾರ್ಯಕರ್ತೆಯರಾದ ಜಯಶೀಲ, ಶುಭಾ, ಕವಿತಾ, ನಂದಿನಿ ರವರುಗಳು ಪಲ್ಸ್ ಪೋಲಿಯೊ ಲಸಿಕೆ ಹಾಕುವಾಗ ಅನುಸರಿಸಬೇಕಾದ ಕ್ರಮಗಳ ಬಗ್ಗೆ ಮಾಹಿತಿ ನೀಡಿದರು.

ಆರೋಗ್ಯ ಇಲಾಖೆಯ ಸಿಬ್ಬಂದಿ, ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರು ತರಬೇತಿ ಶಿಬಿರದಲ್ಲಿ ಭಾಗವಹಿಸಿದ್ದರು.

# ಬಿಜೆಪಿ ತಪ್ಪು ಮರೆಮಾಚಲು ಸುಳ್ಳು ಪ್ರಕರಣ ದಾಖಲು

## ಸುವರ್ಣಸೌಧ ಆವರಣದಲ್ಲಿ ಕಾಂಗ್ರೆಸ್ ಪ್ರತಿಭಟನೆ | ಮುಖ್ಯಮಂತ್ರಿ ಸಿದ್ದರಾಮಯ್ಯ ವಾಗ್ದಾಳಿ

• ಪ್ರಜೋದಯ ವರದಿ

**ಬೆಳಗಾವಿ:** ಬಿಜೆಪಿಯು ದ್ವೇಷ ರಾಜಕಾರಣದಲ್ಲಿ ತೊಡಗಿದ್ದು, ಕಾಂಗ್ರೆಸ್ ನಾಯಕರ ಮೇಲೆ ಸುಳ್ಳು ಕೇಸುಗಳನ್ನು ಹಾಕಿ ಅಪಪ್ರಚಾರ ಮಾಡುತ್ತಿದೆ. ಬಿಜೆಪಿಯ ಈ ಕುತಂತ್ರಕ್ಕೆ ಉತ್ತರವಾಗಿ ನ್ಯಾಯಾಲಯದಲ್ಲಿ ನ್ಯಾಯ ದೊರೆತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದರು.

ನ್ಯಾಷನಲ್ ಹೆರಾಲ್ಡ್ ಪ್ರಕರಣದಲ್ಲಿ ಮೋದಿ ನೇತೃತ್ವದ ಬಿಜೆಪಿ ಸರ್ಕಾರ ಅಧಿಕಾರ ದುರು ಪಯೋಗ ಪಡಿಸಿಕೊಂಡಿರುವುದನ್ನು ಖಂಡಿಸಿ, ಈ ಪ್ರಕರಣದಲ್ಲಿ ಇ.ಡಿ.ಸಲ್ಲಿಸಿದ ಆರೋಪ ಪಟ್ಟಿಯನ್ನು ಸಾರಾಸಗಟಾಗಿ ತಿರಸ್ಕರಿಸಿದ ವಿಚಾ ರಣಾ ನ್ಯಾಯಾಲಯದ (ಟ್ರಯಲ್ ಕೋರ್ಟ್) ತೀರ್ಮಾನವನ್ನು ಬೆಂಬಲಿಸಿ ಶಾಸಕರೊಂದಿಗೆ ಸುವರ್ಣ ಸೌಧದ ಆವರಣದಲ್ಲಿ ನಡೆದ ಪ್ರತಿ ಭಟನೆಯಲ್ಲಿ ಪಾಲ್ಗೊಂಡು ಮಾತನಾಡಿದರು.

ಬಿಜೆಪಿಯವರು ತಮ್ಮ ತಪ್ಪುಗಳನ್ನು ಮರೆ ಮಾಚಲು ದುಷ್ಕೃತ್ಯಕ್ಕೆ ಕೈಹಾಕಿದ್ದಾರೆ. ಇಂದು ದೇಶದಲ್ಲಿ ಭ್ರಷ್ಟಾಚಾರ ತಾಂಡವಾಡುತ್ತಿದೆ. ದೇಶದಲ್ಲಿ ಹಣದುಬ್ಬರ ಹೆಚ್ಚಿದ್ದು ನಿರುದ್ಯೋಗದ ಪ್ರಮಾಣ ಏರಿಕೆಯಾಗಿದೆ. ಜನರ ಮೇಲೆ ತೆರಿಗೆಗಳನ್ನು ಮನಬಂದಂತೆ ಹೇರಿ, ಭಾರತವನ್ನು ಸಾಲಗಾರ ದೇಶವನ್ನಾಗಿ ಮಾಡಲಾಗುತ್ತಿದೆ ಎಂದರು.

ಮನಮೋಹನ್ ಸಿಂಗ್ ಅವರು ದೇಶದ ಪ್ರಧಾನಿಯಾಗಿದ್ದ ಸಂದರ್ಭದಲ್ಲಿ ದೇಶದ ಸಾಲ ಸುಮಾರು 53.11 ಲಕ್ಷ ಕೋಟಿ ಆಗಿತ್ತು. ಆದರೆ ಮೋದಿ ಅವರು ಅಧಿಕಾರಕ್ಕೆ ಬಂದ ನಂತರ ಸಾಲದ ಮೊತ್ತ ಸುಮಾರು 2 ಲಕ್ಷ ಕೋಟಿಯನ್ನೂ ಮೀರಿದೆ.



ಪ್ರಧಾನಿ ಮೋದಿಯವರು ಅಧಿಕಾರಕ್ಕೆ ಬಂದು 11 ವರ್ಷಗಳಲ್ಲಿ ಈ ಸಾಲದ ಮೊತ್ತವು 148 ಲಕ್ಷ ಕೋಟಿ ಹೆಚ್ಚಾಗಿದೆ. ಬಿಜೆಪಿ ಯವರು ತಮ್ಮ ಈ ತಪ್ಪನ್ನು ಮರೆಮಾಚಲು ಇಂತಹ ಸುಳ್ಳು ಪ್ರಕರಣಗಳ ಮೊರೆಹೋಗುತ್ತಿದೆ ಎಂದರು.

**ಪ್ರಧಾನಿಯಿಂದ ಸುಳ್ಳು ಭರವಸೆ**

ಮೋದಿ ಅವರು ಅಧಿಕಾರಕ್ಕೆ ಬಂದ ತಕ್ಷಣ, ದೇಶದಲ್ಲಿ ನಿರುದ್ಯೋಗ ತಾಂಡವವಾಡುತ್ತಿದ್ದು, ಪ್ರತಿವರ್ಷ 2 ಕೋಟಿ ಉದ್ಯೋಗವನ್ನು ಸೃಷ್ಟಿ ಸುವುದಾಗಿ ಘೋಷಿಸಿದ್ದರು. ವಿದೇಶದಲ್ಲಿನ ಕಪ್ಪು ಹಣವನ್ನು ದೇಶಕ್ಕೆ ತಂದು ದೇಶದ ಪ್ರತಿಯೊಬ್ಬರ ಖಾತೆಗೂ 15 ಲಕ್ಷ ರೂ. ನೀಡುವುದಾಗಿ ಹೇಳಿದರು. ಈ ಯಾವುದೇ ಭರವಸೆಗಳನ್ನು ಮೋದಿಯವರು ಈಡೇರಿಸಲಿಲ್ಲ. ಇತ್ತೀಚೆಗೆ ದೈನಂದಿನ ಬಳಕೆಯ ಪೆಟ್ರೋಲ್, ಡೀಸೆಲ್, ಗ್ಯಾಸ್ ಬೆಲೆಗಳು ಗಗನಕ್ಕೇರಿವೆ. ಬಿಜೆಪಿಯವರು ತಮ್ಮ ತಪ್ಪುಗಳನ್ನು ಮರೆಮಾಚಲು, ಇಂತಹ ಸುಳ್ಳು ಪ್ರಕರಣಗಳಿಗೆ ಹೆಚ್ಚು ಒತ್ತು ನೀಡುವ ಮೂಲಕ, ದೇಶದ ಜನರ ದಿಕ್ಕು ತಪ್ಪಿಸುತ್ತಿದ್ದಾರೆಂದರು.

**ನ್ಯಾಷನಲ್ ಹೆರಾಲ್ಡ್ ಪ್ರಕರಣ: ಕೋರ್ಟ್ ನ್ಯಾಯ ಎತ್ತಿಹಿಡಿದಿದೆ :** ನ್ಯಾಷನಲ್ ಹೆರಾಲ್ಡ್ ಪತ್ರಿಕೆಯು 1937 ರಲ್ಲಿ ಜವಾಹರ್ ಲಾಲ್ ನೆಹರೂರವರು ದೇಶದ ಜನರಲ್ಲಿ ಸ್ವಾತಂತ್ರ್ಯ ಹೋರಾ ಟದ ಬಗ್ಗೆ ಜಾಗೃತಿ ಮೂಡಿಸಲು ಈ ಪತ್ರಿಕೆಯನ್ನು ಪ್ರಾರಂಭಿಸಿದರು, ಇದು ಕಾಂಗ್ರೆಸ್ ಪಕ್ಷದ ಆಸ್ತಿ. ನಂತರ ಈ ಪತ್ರಿಕೆ ಯನ್ನು ಯಂಗ್ ಇಂಡಿಯನ್ ಸಂಸ್ಥೆ ವಹಿಸಿಕೊಂಡಿತು. ಸಂಸ್ಥೆಗೆ ಸೇರಿದ್ದ ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಮೋತಿಲಾಲ್ ವೋರಾ ಮತ್ತು ಆಸ್ಕರ್ ಫರ್ನಾಂಡಿಸ್ ಇವರ ಮೇಲೆ ಪ್ರಕರಣ ದಾಖಲಿಸಿ, ಇಡಿ ತನಿಖೆಯನ್ನು ಮಾಡಿಸಲಾಯಿತು. 2012ರಲ್ಲಿ ಸುಬ್ರಮಣ್ಯಂ ಸ್ವಾಮಿಯವರು ಅವರ ವಿರುದ್ಧ ದಾವೆ ಹೂಡಿ ದ್ದರು. ಪ್ರಸ್ತುತ ಇಡಿಯವರು ಸಲ್ಲಿಸಿದ್ದ ಆರೋಪ ಪಟ್ಟಿಯನ್ನು ವಿಚಾರಣಾ ನ್ಯಾಯಾ ಲಯ ತಿರಸ್ಕರಿಸಿದೆ. ಈ ಪ್ರಕರಣವನ್ನುಸುಳ್ಳು ಎಂದು ಹೈಕೋರ್ಟ್ ನ್ಯಾಯವನ್ನು ಎತ್ತಿ ಹಿಡಿದಿದೆ ಎಂದರು.

**ಹೆಸರನ್ನು ಬದಲಾಯಿಸುವುದಷ್ಟೇ ಬಿಜೆಪಿ ಕಾಯಕ**


ಮಹಾತ್ಮಾಗಾಂಧಿ ಉದ್ಯೋಗ ಖಾತ್ರಿ ಯೋಜನೆಯನ್ನು ಬದಲಿಸಿ ವಿಬಿ ಜಿ ರಾಮ್ ಯೋಜನೆಯೆಂದು ಬದಲಿಸಿದ್ದಾರೆ. ರಾಜಭವನವನ್ನು ಇಂದು ಲೋಕಭವನ ಎಂದು ಬದಲಾಯಿಸಿದ್ದಾರೆ. ಇದು ಸರ್ಕಾರದ ಆಸ್ತಿಯಾಗಿದ್ದು, ಇದರ ಹೆಸರನ್ನು ಬದಲಾವಣೆ ಮಾಡಿದ್ದು ಸರಿಯಲ್ಲ. ಹೆಸರು ಬದಲಾಯಿಸುವ ಕಾರ್ಯದಲ್ಲಿ ನಿರತವಾಗಿದೆಯೇ ಹೊರತು ಬಡವರಿಗೆ ಅನುಕೂಲ ಕಲ್ಪಿಸುವ ಕೆಲಸವನ್ನು ಬಿಜೆಪಿಯವರು ಮಾಡುತ್ತಿಲ್ಲ ಎಂದರು.

**ಬಿಜೆಪಿಯವರಿಗೆ ಬಡವರ ಬಗ್ಗೆ ಕಾಳಜಿಯಿಲ್ಲ**

ಮಹಾತ್ಮಗಾಂಧಿ ಹಾಗು ಅಂಬೇಡ್ಕರ್ ಅವರ ಚಿಂತನೆಗಳನ್ನು ಇಷ್ಟಪಡದ ಬಿಜೆಪಿಯವರಿಗೆ ಬಡವರನ್ನೂ ಕಂಡರೂ ಆಗುವುದಿಲ್ಲ. ದೇಶದ ಬಡವರಿಗೆಂದು ತಂದಿರುವ ಯಾವುದೇ ಯೋಜನೆಗಳಿಗೆ ಬಿಜೆಪಿಯವರ ಸಹಮತಿಯಿಲ್ಲ. ಬಡ ವರು, ದೀನದಲಿತರು, ಹಿಂದುಳಿದವರು, ಅಲ್ಪ ಸಂಖ್ಯಾತರನ್ನು ಕಡೆಗಣಿಸುವ ಬಿಜೆಪಿಯವರು, ಕರ್ನಾಟಕದಲ್ಲಿ ಬಡವರಿಗಾಗಿ ತಂದ ಗ್ಯಾರಂಟಿ ಯೋಜನೆಗಳನ್ನು ವಿರೋಧಿಸಿದರು. ಈ ಜನಪರ ಯೋಜನೆಯನ್ನು ದೇಶದೆಲ್ಲೆಡೆ ಬಿಜೆಪಿ ಅನುಸರಿಸುತ್ತಿದೆಂದರು.

## ಮೋದಿ ಸರ್ಕಾರ ಎಲ್ಲಾ ವಲಯದಲ್ಲೂ ಏಕಸ್ವಾಮ್ಯ ಸೃಷ್ಟಿಸುತ್ತಿದೆ: ರಾಹುಲ್ ಗಾಂಧಿ

• ಪ್ರಜೋದಯ ವರದಿ



**ನವದೆಹಲಿ:** ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಭಾರತದ ಪ್ರತಿಯೊಂದು ಕ್ಷೇತ್ರದಲ್ಲೂ ಏಕಸ್ವಾಮ್ಯವನ್ನು ಸೃಷ್ಟಿಸುತ್ತಿದೆ ಎಂದು ಆರೋಪಿಸಿದ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಭಾರತದ ಆರ್ಥಿಕತೆ ನಿಯಂತ್ರಣವನ್ನು ಪುನಃ ಎಂಎಸ್‌ಎಂಇಗಳ ಕೈಗೆ ನೀಡಬೇಕೆಂದು ಒತ್ತಾಯಿಸಿದ್ದಾರೆ.

ಸಂಸತ್ತಿನ ಚಳಿಗಾಲದ ಅಧಿವೇಶನದಲ್ಲಿ ಭಾಗವಹಿಸಿರುವ ಅವರು, ಅತಿಸಣ್ಣ, ಸಣ್ಣ ಮತ್ತು ಮಧ್ಯಮ ವರ್ಗದ ಕೈಗಾರಿಕಾ ವಲಯದ ಐಸ್ ಕ್ರೀಂ ತಯಾರಕ ಕಂಪನಿಗಳ ನಿಯೋಗವನ್ನು ಭೇಟಿಯಾಗಿ, ಅವರ ಸಮಸ್ಯೆಗಳನ್ನು ಆಲಿಸಿದ ನಂತರ ಸಾಮಾಜಿಕ ಜಾಲತಾಣವೊಂದರಲ್ಲಿ ಈ ಮಾಹಿತಿ ಹಂಚಿಕೊಂಡಿದ್ದಾರೆ.

ಒಬ್ಬರು ಅಥವಾ ಇಬ್ಬರು ಎಲ್ಲಾ ಕ್ಷೇತ್ರಗಳ ಮೇಲೆ ಹಿಡಿತ ಸಾಧಿಸುತ್ತಿರುವುದು ಭಾರತಕ್ಕೆ ಅಂಟಿರುವ ಶಾಪ. ಮೋದಿ ನೇತೃತ್ವದ ಕೇಂದ್ರ ಸರ್ಕಾರವು ಎಲ್ಲ ಕ್ಷೇತ್ರಗಳಲ್ಲೂ ಒಬ್ಬರು ಅಥವಾ ಇಬ್ಬರ ಪಾರಮ್ಯಕ್ಕೆ ಅವಕಾಶ ಕಲ್ಪಿಸುತ್ತಿದೆ ಎಂದು ಟೀಕಿಸಿದ್ದಾರೆ.

ಸಣ್ಣ ಮತ್ತು ಮಧ್ಯಮವರ್ಗದ ಐಸ್‌ಕ್ರೀಂ ತಯಾರಕರನ್ನು ಭೇಟಿಯಾಗಿ ಚರ್ಚಿಸಿದ ನಂತರ, ಸರ್ಕಾರ ತನಗೆ ಅನುಕೂಲವಾಗಿರುವ ಕೈಗಾರಿಕೋದ್ಯಮಿಗಳ ಲಾಭಕ್ಕಾಗಿ ಸಣ್ಣ ವ್ಯವಹಾರಗಳನ್ನು ನಾಶ ಮಾಡಲು ನಿರ್ಧರಿಸಿರುವುದು ಸ್ಪಷ್ಟವಾಗಿದೆ ಎಂದು ಹೇಳಿದ್ದಾರೆ.

ಸಣ್ಣ ಐಸ್ ಕ್ರೀಮ್ ತಯಾರಕರು, ಭಾರತದ ಬಡ ಮತ್ತು ಕೆಳ ಮಧ್ಯಮ ವರ್ಗದವರಾಗಿ ದ್ದಾರೆ. ಇಂಥಹವರು ದೇಶದಾದ್ಯಂತ ಸಾವಿರಾರು ಮಂದಿ ಇದ್ದಾರೆ. ಲಕ್ಷಾಂತರ ಜನರಿಗೆ ಉದ್ಯೋಗ ಒದಗಿಸುತ್ತಿದ್ದಾರೆ ಎಂದಿದ್ದಾರೆ.

## ಬಿರಡಹಳ್ಳಿ ಗ್ರಾ.ಪಂ. ಅಧ್ಯಕ್ಷರಾಗಿ ಸೋಮಶೇಖರ್ ಅವಿರೋಧ ಆಯ್ಕೆ



• ಪ್ರಜೋದಯ ವರದಿ

**ಸಕಲೇಶಪುರ:** ತಾಲ್ಲೂಕಿನ ಬಿರಡಹಳ್ಳಿ ಗ್ರಾಮ ಪಂಚಾಯಿತಿ ನೂತನ ಅಧ್ಯಕ್ಷರಾಗಿ ಜೆ.ಕೆ.ಸೋಮಶೇಖರ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಈ ಹಿಂದಿನ ಅಧ್ಯಕ್ಷ ಎಸ್.ಡಿ.ಸತೀಶ್ ಅವರು ರಾಜೀನಾಮೆ ನೀಡಿದ್ದರಿಂದ ಅಧ್ಯಕ್ಷ ಸ್ಥಾನಕ್ಕೆ ಚುನಾವಣೆ ಪ್ರಕ್ರಿಯೆ ನಡೆಯಿತು. ಆದರೆ ಬೇರೆ ಯಾವುದೇ ಅಭ್ಯರ್ಥಿಗಳು ನಾಮಪತ್ರ ಸಲ್ಲಿ ಸದ ಕಾರಣ, ಸೋಮಶೇಖರ್ ಅವರನ್ನು ಅವಿರೋಧವಾಗಿ ಘೋಷಿಸಲಾಯಿತು.

ಮಾಜಿ ಅಧ್ಯಕ್ಷ ಎಸ್.ಡಿ.ಸತೀಶ್, ಗ್ರಾಮ ಪಂಚಾಯತಿ ಸದಸ್ಯರಾದ ದೇವರಾಜ್, ಮಧುಮಣಿ, ವನಜಾಕ್ಷಿ, ಲಕ್ಷ್ಮಿ, ಬೈಕರೆ ದೇವರಾಜ್, ಶಾರದಮ್ಮ ಸೇರಿ ವಿವಿಧ ಸಂಘಟನೆಗಳ ಮುಖ್ಯಸ್ಥರು ಹಾಗೂ ಮುಖಂಡರು ಉಪಸ್ಥಿತರಿದ್ದರು.

## ಕಾರ್ಮಿಕರ ಮೇಲೆ ಪಿಡಿಒ ಹಲ್ಲೆ: ಅಮಾನತುಗೊಳಿಸಲು ಆಗ್ರಹ

• ಪ್ರಜೋದಯ ವರದಿ



**ಹಾಸನ:** ದಲಿತ ಕೂಲಿ ಕಾರ್ಮಿಕರ ಮೇಲೆ ಮಾರಣಾಂತಿಕ ಹಲ್ಲೆ ಮಾಡಿಸಿರುವ ಬೇಲೂರು ತಾಲ್ಲೂಕು ಚಿಕ್ಕ ಮೇದೂರು ಪಿಡಿಒ ಸಂತೋಷ್ ಅವರನ್ನು ಸೇವೆಯಿಂದ ಅಮಾನತುಗೊಳಿಸುವಂತೆ ದಸಂಸ ಜಿಲ್ಲಾಧ್ಯಕ್ಷ ಶಿವಕುಮಾರ್ ತಿರುಮಲನಹಳ್ಳಿ ಅವರು ಒತ್ತಾಯಿಸಿದರು.

ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬೇಲೂರು ತಾಲ್ಲೂಕು ಬೆಣ್ಣೂರು ಗ್ರಾಮದ ಪರಿಶಿಷ್ಟ ಜಾತಿಗೆ ಸೇರಿದ ಶಿವಶಂಕರ ಹಾಗು ಶಿವಮೂರ್ತಿ ಎಂಬುವವರು ಡಿ.5 ರಂದು ಚಿಕ್ಕಮಗಳೂರು-ಬೇಲೂರು ಮುಖ್ಯ ರಸ್ತೆಯ ಬದಿಯಲ್ಲಿ ವಿದ್ಯುತ್ ಕಂಬ ಮತ್ತು ಸೇತುವೆಗಳಿಗೆ ಬಣ್ಣ ಬಳಿಯುತ್ತಿದ್ದು, ಒಂದು ಬದಿಯ ಕೆಲಸ ಮುಗಿದ ನಂತರ ಇನ್ನೊಂದು ಬದಿಗೆ ಹೋಗಲು ರಸ್ತೆ ದಾಟಲು ವಾಹನಕ್ಕೆ ಕೈ ಅಡ್ಡ ಒಡ್ಡಿದರು. ಅದೇ ವೇಳೆಗೆ ಕೆಎ-18-ಎಂಎ- 9937 ನಂಬರಿನ ಕಾರಿನಲ್ಲಿ ಬರುತ್ತಿದ್ದ ಪಿಡಿಒ, ಕೈ ಅಡ್ಡ ಹಾಕಿದ್ದಕ್ಕೆ ದುಂಡಾ ವರ್ತನೆ ತೋರಿ ಜಾತಿ ನಿಂದನೆ ಮಾಡಿ, ಅದಾದ ಬಳಿಕ ಕೆಲ ಗೂಂಡಾಗಳನ್ನು ಕರೆಸಿ ಕಾರ್ಮಿಕರ ಮೇಲೆ ಗಂಭೀರ ಹಲ್ಲೆ ಮಾಡಿಸಿದ್ದಾರೆಂದು ದೂರಿದರು.

ಈ ಸಂಬಂಧ ಡಿ.7 ರಂದು ಶಿವಮೂರ್ತಿ ಅವರು ದೂರು ನೀಡಿದರೂ, ಅಲ್ಲಿವರೆಗೂ ಪೊಲೀಸರು ಎಫ್‌ಐಆರ್ ದಾಖಲು ಮಾಡಿರಲಿಲ್ಲ. ಈ ನಡುವೆ ಠಾಣೆ ಎಸ್‌ಹೆಚ್‌ಒ ಪುರುಷೋತ್ತಮ್ ಎಂಬುವವರು ಸಂತೋಷ್‌ನನ್ನು ಕರೆಸಿ ಪ್ರತಿದೂರು ದಾಖಲಿಸಿದ್ದಾರೆ. ನಂತರ ಮೇಲಾಧಿಕಾರಿಗಳು ಹೇಳಿದ ನಂತರ ವಿಳಂಬವಾಗಿ ಎಫ್‌ಐಆರ್ ದಾಖಲು ಮಾಡಲಾಗಿದೆ. ಕಾರ್ಮಿಕರ ಮೇಲೂ ಪ್ರಕರಣ ದಾಖಲಾದ ನಂತರ ಕಾರ್ಮಿಕರು ತಲೆ ಮರೆಸಿಕೊಂಡಿ ದ್ದಾರೆ. ಕೂಡಲೇ ಬಿ ರಿಪೋರ್ಟ್ ಹಾಕಿ ಅದನ್ನು ರದ್ದು ಮಾಡಬೇಕೆಂದು ಆಗ್ರಹಿಸಿದರು.

ಕೂಡಲೇ ಪಿಡಿಒ ಸಂತೋಷ್ ಅವರನ್ನು ಅಮಾನತು ಮಾಡಬೇಕು, ಹಲ್ಲೆ ಮಾಡಿರುವ ಗೂಂಡಾಗಳನ್ನು ಬಂಧಿಸಿ ಶಿಕ್ಷೆಗೆ ಗುರಿಪಡಿಸಬೇಕು. ಪ್ರಕರಣ ಸಂಬಂಧ ಎಸ್‌ಸಿ, ಎಸ್‌ಟಿ ಆಯೋಗ ಸೇರಿ ಸಂಬಂಧಪಟ್ಟ ಆಯೋಗಗಳಿಗೆ ಲಿಖಿತ ದೂರು ನೀಡಲಾಗುವುದು. ಪಿಡಿಒ ಮೇಲೆ ಶೀಘ್ರ ಕ್ರಮ ಕೈಗೊಳ್ಳದೇ ಇದ್ದರೆ ಜಿಲ್ಲಾಧಿಕಾರಿ ಕಚೇರಿ ಎದುರು ಅನಿರ್ದಿಷ್ಟ ಮುಷ್ಕರ ನಡೆಸುವ ಎಚ್ಚರಿಕೆ ನೀಡಿದರು.

ದಲಿತ ಮುಖಂಡ ಹರೀಶ್ ತಿರುಮಲನಹಳ್ಳಿ, ಮಹಿಳಾ ಘಟಕದ ರೀತಾ, ಕಾರ್ಮಿಕ ಪತ್ನಿಯರಾದ ಮೋಹನಾಕ್ಷಿ, ರತ್ನ, ಹರ್ಷಿತ್ ಇದ್ದರು.

## ಇಂದು ಡಿ.ಕೆ.ಸುರೇಶ್ ಹುಟ್ಟುಹಬ್ಬ ಆಚರಣೆ

• ಪ್ರಜೋದಯ ವರದಿ



**ಹಾಸನ:** ಮಾಜಿ ಸಂಸದ, ಬಮೂಲ್ ಅಧ್ಯಕ್ಷ ಡಿ.ಕೆ.ಸುರೇಶ್ ಅವರ ಹುಟ್ಟುಹಬ್ಬದ ಅಂಗವಾಗಿ ಡಿ.18 ರಂದು ನಗರದಲ್ಲಿ ವಿವಿಧ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಕಾಂಗ್ರೆಸ್ ಸಮಿತಿ ಪ್ರಧಾನ ಕಾರ್ಯದರ್ಶಿ ರಘು ದಾಸರ ಕೊಪ್ಪಲು ಅವರು ತಿಳಿಸಿದರು.

ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಡಿ.18 ರಂದು ಬೆಳಿಗ್ಗೆ 11.30ಕ್ಕೆ ನಗರದ ಹೇಮಾವತಿ ಪ್ರತಿಮೆ ಸಮೀಪ ರಕ್ತದಾನ ಶಿಬಿರ ಆಯೋಜಿಸಲಾಗಿದೆ. ಮಧ್ಯಾಹ್ನ 12 ಗಂಟೆಗೆ ಕೇಕ್ ಕತ್ತರಿಸುವ ಮೂಲಕ ಹುಟ್ಟುಹಬ್ಬ ಆಚರಣೆ ಮಾಡಲಾಗುವುದು. ನಂತರ 12.30ಕ್ಕೆ ಸಾರ್ವಜನಿಕರಿಗೆ ಅನ್ನಸಂತರ್ಪಣೆ ವ್ಯವಸ್ಥೆ ಮಾಡಲಾಗಿದೆ. ಸಂಜೆ ನಗರದ ನೀರುವಾಗಿಲು ಆಂಜನೇಯಸ್ವಾಮಿ ದೇವಸ್ಥಾನದಲ್ಲಿ ಡಿ.ಕೆ.ಸುರೇಶ್ ಹೆಸರಿನಲ್ಲಿ ವಿಶೇಷ ಪೂಜೆ ಹಾಗು ದೇವಸ್ಥಾನದ ಮುಂಭಾಗ ಈಡುಗಾಯಿ ಒಡೆಯುವ ಕಾರ್ಯಕ್ರಮವಿದೆ. ಬಳಿಕ ಆಜಾದ್ ರಸ್ತೆಯಲ್ಲಿರುವ ಗುಜರಾತಿ ಬಾಬಾ ದರ್ಗಾದಲ್ಲಿ ಪ್ರಾರ್ಥನೆ ಸಲ್ಲಿಸಲಾಗುವುದು. ತರುವಾಯ ಎನ್.ಆರ್.ವೃತ್ತದಲ್ಲಿರುವ ಚರ್ಚ್‌ನಲ್ಲಿ ವಿಶೇಷ ಪ್ರಾರ್ಥನೆ ನಡೆಯಲಿದೆ. ರಾತ್ರಿ ನಗರದ ರಸ್ತೆ ಬದಿಯಲ್ಲಿ ಮಲಗಿರುವ ನಿರಾಶಿತರಿಗೆ ಬೆಡ್ ಶೀಟ್ ವಿತರಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

ಸಂಸದ ಶ್ರೇಯಸ್ ಪಟೇಲ್, ಶಾಸಕ ಕೆ.ಎಂ.ಶಿವಲಿಂಗೇಗೌಡ, ಮಾಜಿ ಸಚಿವ ಬಿ.ಶಿವರಾಂ, ಹಿರಿಯ ಮುಖಂಡರು, ಪರಾಜಿತ ಅಭ್ಯರ್ಥಿಗಳು, ವಿವಿಧ ಘಟಕಗಳ ಪದಾಧಿಕಾ ರಿಗಳು, ಕೆಪಿಸಿಸಿ ಸದಸ್ಯರು, ಜಿಲ್ಲೆಯ ಎಲ್ಲಾ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು, ಜಿಲ್ಲಾ ಮುಂಚೂಣಿ ಘಟಕಗಳ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಕಾರ್ಯಕರ್ತರು ಭಾಗವಹಿಸುವರೆಂದರು.

ಜಿಲ್ಲಾ ಯೂತ್ ಕಾಂಗ್ರೆಸ್ ಅಧ್ಯಕ್ಷ ರಂಜಿತ್ ಗೊರೂರು, ನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಬ್ದುಲ್ ಖಯ್ಯುಂ, ಉಪಾಧ್ಯಕ್ಷರಾದ ಹರೀಶ್, ರಾಘವೇಂದ್ರ ಪ್ರಸಾದ್, ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಚಂದ್ರಶೇಖರ್, ನಗರಪಾಲಿಕೆ ಸದಸ್ಯ ಆಶು ಆಸೀಫ್ ಇದ್ದರು.

## ಇಂದು ಉರ್ದು ಕವಿಗೋಷ್ಠಿ

**ಹಾಸನ:** ಉರ್ದು ಅಕಾಡೆಮಿ, ರೆಹ್ಬರ್ ವೆಲ್ಫೇರ್ ಟ್ರಸ್ಟ್ ವತಿಯಿಂದ ಉರ್ದು ಭಾಷೆ ಮತ್ತು ಸಾಹಿತ್ಯದ ಅಭಿವೃದ್ಧಿ ಹಾಗು ಸಾಂಸ್ಕೃತಿಕ ಪರಂಪರೆ ಸಂರಕ್ಷಣೆ ಉದ್ದೇಶದಿಂದ ರಾಷ್ಟ್ರಮಟ್ಟದ ಉರ್ದು ಮುಶಯಿರಾ (ಕವಿಗೋಷ್ಠಿ) ವನ್ನು ಡಿ.18 ರಂದು ಸಂಜೆ 8.30ಕ್ಕೆ ನಗರದ 80 ಅಡಿ ರಸ್ತೆಯ ತಾಜ್ ಕನ್ವೆನ್ಷನ್‌ಹಾಲ್ ಆಯೋಜಿಸಲಾಗಿದೆ.

ಮುಶಯಿರಾ ಅಧ್ಯಕ್ಷತೆಯನ್ನು ವಿದ್ವಾಂಸ ಮೌಲಾನಾ ಮುಫ್ತಿ ಮುಹಮ್ಮದ್ ಅಲಿ ಖಾಜಿ ವಹಿಸಲಿದ್ದಾರೆ. ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಉದ್ಘಾಟನೆ ನೆರವೇರಿಸುವರು. ಮುಖ್ಯ ಅತಿಥಿಯಾಗಿ ಪತ್ರಕರ್ತರ ಸಂಘದ ರಾಜ್ಯ ಉಪಾಧ್ಯಕ್ಷ ಹೆಚ್.ಬಿ. ಮದನಗೌಡ ಭಾಗವಹಿಸು ವರು. ನಿರೂಪಣೆಯನ್ನು ಉರ್ದು ಕವಿ ಜನಾಬ್ ಅನ್ವರ್ ಖಾನ್ ಅನ್ವರ್ ಮಾಡಲಿದ್ದು, ಗೌರವ ಅತಿಥಿಗಳಾಗಿ ಬೆಂಗಳೂರಿನ ಜನಾಬ್ ಮುನೀರ್ ಅಹ್ಮದ್ ಜಾಯ್, ಹಾಸನದ ಜನಾಬ್ ಸೈಯದ್ ಸಜ್ಜಾದ್ ಪಾಷ, ಜನಾಬ್ ಸಯ್ಯದ್ ತಾಜ್, ಡಾಟ ಸಯ್ಯದ್ ಅಖ್ತರ್ ಖಾನಂ ಹಾಗೂ ಜನಾಬ್ ಹಾಜಿ ಸೈಯದ್ ಕಬೀರ್ ಅಹ್ಮದ್ ಮೀರ್ ಉಪಸ್ಥಿತರಿರಲಿದ್ದಾರೆ.

ಮುಶಾಯಿರಾದಲ್ಲಿ ದೇಶದ ವಿವಿಧ ರಾಜ್ಯಗಳಿಂದ ಆಗಮಿಸುವ ಖ್ಯಾತ ಕವಿಗಳು ಕಾವ್ಯ ವಾಚನ ನಡೆಸಲಿದ್ದಾರೆ.

## ಡಿ.20 ರಂದು ಹಿತಾನ್ಯಾ ಭರತನಾಟ್ಯ ರಂಗ ಪ್ರವೇಶ



• ಪ್ರಜೋದಯ ವರದಿ

**ಹಾಸನ:** ಶ್ರವಣಬೆಳಗೊಳ ದಿಗಂಬರ ಜೈನ ಮಹಾಸಂಸ್ಥಾನ ಮಠ, ಚನ್ನರಾಯಪಟ್ಟಣದ ನ್ಯಾಷನಲ್ ಕ್ಲಾಸಿಕಲ್ ಡಾನ್ಸ್ ಅಕಾಡೆಮಿ ವತಿಯಿಂದ ಡಿ.20 ರಂದು ಬಾಲಕಿ ಬಿ.ವೈ.ಹಿತಾನ್ಯಾ ಭರತನಾಟ್ಯ ರಂಗ ಪ್ರವೇಶ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಅಂತರ ರಾಷ್ಟ್ರೀಯ ಭರತನಾಟ್ಯ ಕಲಾವಿದೆ ವಿದುಷಿ ಸ್ವಾತಿ ಪಿ.ಭಾರಧ್ವಾಜ್ ಅವರು ಹೇಳಿದರು.

ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶ್ರವಣ ಬೆಳಗೊಳ ಪಂಪ ಗ್ರಂಥಾಲಯ ಸಭಾಂಗಣದಲ್ಲಿ ಡಿ.20ರಂದು ಬೆಳಿಗ್ಗೆ 10 ಗಂಟೆಗೆ ಸ್ವಸ್ತಿಶ್ರೀ ಅಭಿನವ ಚಾರುಕೀರ್ತಿ ಭಟ್ಟಾರಕ ಸ್ವಾಮೀಜಿ ಅವರ ಸನ್ನಿಧ್ಯದಲ್ಲಿ ನನ್ನ ಶಿಷ್ಯೆ, ಹಿರೀಸಾವೆ ಹೋಬಳಿ ಬಾಳಗಂಜಿ ಗ್ರಾಮದ 10 ವರ್ಷದ ಹಿತಾನ್ಯಾ, ಸುಮಾರು 2 ಗಂಟೆಗಳ ಕಾಲ ನಿರಂತರವಾಗಿ ಭರತನಾಟ್ಯ ಪ್ರದರ್ಶನ ನೀಡುವ ಮೂಲಕ ರಂಗ ಪ್ರವೇಶ ಮಾಡಲಿದ್ದಾಳೆ ಎಂದು ತಿಳಿಸಿದರು.

ಸಂಸದ ಶ್ರೇಯಸ್ ಎಂ.ಪಟೇಲ್, ಶಾಸಕ ಸಿ.ಎನ್.ಬಾಲಕೃಷ್ಣ, ಎಸ್‌ಎಲ್‌ಒ ವಿ.ಮಂಜುನಾಥ್, ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ರಾಜ್ಯ ಉಪಾಧ್ಯಕ್ಷ ಹೆಚ್.ಬಿ.ಮದನ ಗೌಡ, ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಜೆ.ಆರ್. ಕೆಂಚೇಗೌಡ, ವಿಶೇಷ ಆಹ್ವಾನಿತ ಸದಸ್ಯ ರವಿನಾಕಲಗೂಡು, ಮುಖ್ಯ ಇಂಜಿನೀಯರ್ ಸತೀಶ್ ಚಂದ್ರ, ಪೂರ್ಣಚಂದ್ರ ಪಬ್ಲಿಕ್ ಸ್ಕೂಲ್ ಅಧ್ಯಕ್ಷ ಡಾ.ವಿಜಯ ಕುಮಾರ್ ಸೇರಿ ಅನೇಕ ಗಣ್ಯರು ಭಾಗವಹಿಸಲಿದ್ದಾರೆ ಎಂದರು.

ರಂಗಪ್ರವೇಶ ಪಕ್ಕ ವಾದ್ಯ ವಿಭಾಗದಲ್ಲಿ ನಟ್ಟುವಾಂಗಮ್, ವಿದುಷಿ ಸ್ವಾತಿ ಪಿ.ಭಾರದ್ವಾಜ್, ಗಾಯನ, ವಿದುಷಿ ಅಕ್ಷತಾ ಉಪಾಧ್ಯಾಯ, ಮೃದಂಗಂ ವಿದುಷಿ ಶಶಿಕಲಾ, ವೈಯಲಿನ್ ವಿದುಷಿ ರಮ್ಯಾ ಚೇತನ್, ರಿದಂಪ್ಯಾಡ್ ವಿದುಷಿ ಎಂ.ಕೆ.ವಾಸವಿ ಸಹಕರಿಸಲಿದ್ದಾರೆ ಎಂದರು.

ನ್ಯಾಷನಲ್ ಕ್ಲಾಸಿಕಲ್ ಡ್ಯಾನ್ಸ್ ಅಕಾಡೆಮಿ ಅಧ್ಯಕ್ಷೆ ಅನಿತಾ ಪ್ರಕಾಶ್, ಬಾಲ ಕಲಾವಿದೆ ಹಿತಾನ್ಯಾ, ಅವರ ತಾಯಿ ರಾಣಿ ಯೋಗೇಶ್ ಇದ್ದರು.

## ಟಿ-20 ರ‍್ಯಾಂಕಿಂಗ್: ಅಗ್ರಸ್ಥಾನದಲ್ಲಿ ಅಭಿಷೇಕ್ ಶರ್ಮಾ-ವರುಣ್ ಚಕ್ರವರ್ತಿ



• ಪ್ರಜೋದಯ ವರದಿ

**ನವದೆಹಲಿ:** ಭಾರತದ ಆರಂಭಿಕ ಆಟಗಾರ ಅಭಿಷೇಕ್ ಶರ್ಮಾ ಹಾಗೂ ಸ್ಪಿನ್ ಬೌಲರ್ ವರುಣ್ ಚಕ್ರವರ್ತಿ ಅವರು ಐಸಿಸಿ ನೂತನ ಟಿ-20 ರ‍್ಯಾಂಕಿಂಗ್‌ನಲ್ಲಿ ಬ್ಯಾಟರ್ ಹಾಗೂ ಬೌಲರ್‌ಗಳ ಪಟ್ಟಿಯಲ್ಲಿ ಅಗ್ರಸ್ಥಾನವನ್ನು ಕಾಯ್ದುಕೊಂಡಿದ್ದಾರೆ.

ಸ್ಫೋಟಕ ಆಟಗಾರ ಅಭಿಷೇಕ್ ಶರ್ಮಾ ಅವರು ಟಿ-20 ರ‍್ಯಾಂಕಿಂಗ್‌ನ ಬ್ಯಾಟರ್‌ಗಳ ಪಟ್ಟಿಯಲ್ಲಿ 909 ಪಾಯಿಂಟ್ ಹೊಂದುವ ಮೂಲಕ ಅಗ್ರಸ್ಥಾನದಲ್ಲೇ ಮುಂದುವರಿದಿದ್ದಾರೆ. ರ‍್ಯಾಂಕಿಂಗ್‌ನಲ್ಲಿ 2ನೇ ಸ್ಥಾನದಲ್ಲಿರುವ ಇಂಗ್ಲೆಂಡ್‌ನ ಫಿಲ್ ಸಾಲ್ಟ್ 849 ಪಾಯಿಂಟ್ ಹೊಂದಿದ್ದಾರೆ. ಭಾರತದ ತಿಲಕ್ ವರ್ಮಾ ಅವರು 2 ಸ್ಥಾನಮೇಲೇರಿದ್ದು,774 ಪಾಯಿಂಟ್‌ಗಳೊಂದಿಗೆ 4ನೇ ಸ್ಥಾನದಲ್ಲಿದ್ದಾರೆ. ಫಾರ್ಮ್ ಕಳೆದುಕೊಂಡಿರುವ ನಾಯಕ ಸೂರ್ಯಕುಮಾರ್ ಯಾದವ್ ಅವರು ಒಂದು ಸ್ಥಾನ ಕುಸಿತ ಕಂಡಿದ್ದು, 669 ಪಾಯಿಂಟ್‌ಗಳೊಂದಿಗೆ 10ನೇ ಸ್ಥಾನದಲ್ಲಿದ್ದಾರೆ.

**ಅಗ್ರಸ್ಥಾನದಲ್ಲೇ ಮುಂದುವರಿದ ವರುಣ್ ಚಕ್ರವರ್ತಿ**

ಭಾರತದ ಪ್ರಮುಖ ಸ್ಪಿನ್ನರ್ ವರುಣ್ ಚಕ್ರವರ್ತಿ ಅವರು 818 ಪಾಯಿಂಟ್‌ಗಳೊಂದಿಗೆ ನೂತನ ಟಿ-20 ರ‍್ಯಾಂಕಿಂಗ್‌ನಲ್ಲಿ ಅಗ್ರಸ್ಥಾನದಲ್ಲೇ ಮುಂದುವರಿದಿದ್ದಾರೆ. ಟಿ-20 ರ‍್ಯಾಂಕಿಂಗ್‌ನಲ್ಲಿ ಭಾರತದ ಬೌಲರ್ ಒಬ್ಬರ ಅತ್ಯುತ್ತಮ ಸಾಧನೆ ಇದಾಗಿದೆ. ಈ ಹಿಂದೆ ಬೂಮ್ರಾ ಅವರು 783 ಪಾಯಿಂಟ್ ಹೊಂದಿದ್ದರು. ಐಪಿಎಲ್ ಮಿನಿ ಹರಾಜಿನಲ್ಲಿ ಮೂಲ ಬೆಲೆ 2 ಕೋಟಿಗೆ ಆರ್‌ಸಿಬಿ ಪಾಲಾಗಿರುವ ಇಂಗ್ಲೆಂಡ್ ತಂಡದ ವೇಗದ ಬೌಲರ್ ಜಾಕೋಬ್ ಡಫಿ ಅವರು 699 ಪಾಯಿಂಟ್‌ಗಳೊಂದಿಗೆ 2ನೇ ಸ್ಥಾನದಲ್ಲಿದ್ದಾರೆ. ಬೌಲಿಂಗ್ ರ‍್ಯಾಂಕಿಂಗ್‌ನಲ್ಲಿ ಭಾರತದ ಸ್ಪಿನ್ ಆಲ್ ರೌಂಡರ್ ಅಕ್ಷರ್ ಪಟೇಲ್ 13ನೇ ಸ್ಥಾನ ಹಾಗೂ ವೇಗಿ ಅರ್ಷದೀಪ್ ಸಿಂಗ್ ಅವರು 4 ಸ್ಥಾನ ಏರಿಕೆ ಕಂಡಿದ್ದು, 16ನೇ ಸ್ಥಾನದಲ್ಲಿದ್ದಾರೆ.



ಆಲ್‌ರೌಂಡರ್‌ಗಳ ಪಟ್ಟಿಯಲ್ಲಿ ಪಾಕಿಸ್ತಾನದ ಸೈಮ್ ಆಯೂಬ್ 295 ಪಾಯಿಂಟ್‌ನೊಂದಿಗೆ ಅಗ್ರಸ್ಥಾನದಲ್ಲಿದ್ದಾರೆ. ಭಾರತದ ಹಾರ್ದಿಕ್ ಪಾಂಡ್ಯ 222 ಪಾಯಿಂಟ್‌ಗಳೊಂದಿಗೆ 4ನೇ ಸ್ಥಾನದಲ್ಲಿದ್ದಾರೆ. ಅಕ್ಷರ್ ಪಟೇಲ್ 186 ಪಾಯಿಂಟ್‌ನೊಂದಿಗೆ 9ನೇ ಸ್ಥಾನದಲ್ಲಿದ್ದಾರೆ.

ಟಿ-20 ತಂಡಗಳ ಪಟ್ಟಿಯಲ್ಲಿ ಭಾರತವು ಅಗ್ರಸ್ಥಾನದಲ್ಲೇ ಮುಂದುವರಿದಿದೆ.

## ಬೈಕ್ ನಿಯಂತ್ರಣ ತಪ್ಪಿ ಕೆಳಗೆ ಬಿದ್ದ ಯುವಕ ಸಾವು

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ನಿಯಂತ್ರಣ ತಪ್ಪಿ ಬೈಕ್ ಮೇಲಿಂದ ಬಿದ್ದ ಯುವಕ ಸಮಯಕ್ಕೆ ಸರಿಯಾಗಿ ಆಸ್ಪತ್ರೆಗೆ ದಾಖಲಾಗದ ಹಿನ್ನಲೆಯಲ್ಲಿ ಮೃತಪಟ್ಟಿರುವ ದಾರುಣ ಘಟನೆ ತಾಲ್ಲೂಕಿನ ದಿಡಗ-ಕಾಮನಘಟ್ಟ ಮಾರ್ಗ ಮಧ್ಯೆ ನಡೆದಿದೆ.

ಉತ್ತರ ಪ್ರದೇಶದ ಗೋರಾಪುರ ಜಿಲ್ಲೆಯ ಭಗವಾನ್‌ಪುರ ಗ್ರಾಮದ ರಾಹುಲ್ (25) ಮೃತ ದುರ್ದೈವಿ. ಸಹೋದರ ಬಬ್ಲು ಜೊತೆಗೆ ಗೋಡೆಗಳಿಗೆ ಬಣ್ಣ ಬಳಿಯುವ ಕೆಲಸಕ್ಕೆಂದು ರಾಜ್ಯಕ್ಕೆ ಬಂದಿದ್ದ. ದಿಡಗ ಗ್ರಾಮದಲ್ಲಿ ಮನೆ ಪೈಟಿಂಗ್ ಕೆಲಸ ಮಾಡಿಕೊಂಡಿದ್ದು ಡಿ.14ರ ಸಂಜೆ ಬೇಗ ಬರುತ್ತೇನೆಂದು ಬೈಕ್ ತೆಗೆದುಕೊಂಡು ಹೋಗಿದ್ದ. ರಾತ್ರಿ 8 ಗಂಟೆ ಸಮಯದಲ್ಲಿ ಆತನೇ ಕರೆ ಮಾಡಿ ಬೈಕ್ ನಿಯಂತ್ರಣ ತಪ್ಪಿ ಕೆಳಗೆ ಬಿದ್ದಿದ್ದು ತಲೆಗೆ ಪೆಟ್ಟಾಗಿದೆ ಎಂದು ಹೇಳಿದ್ದ. ಆಗ ಸಹೋದರ ಬಬ್ಲು ಹಾಗು ಇತರರು ವಾಪಾಸ್ ಬಾ ಎಂದಿದ್ದಾರೆ. ಬರುತ್ತೇನೆಂದು ಕರೆ ಸ್ಥಗಿತಗೊಳಿಸಿದ ರಾಹುಲ್ ರಾತ್ರಿ 10 ಗಂಟೆಯಾದರೂ ವಾಪಾಸ್ ಬಾರದ ಹಿನ್ನಲೆಯಲ್ಲಿ ಆತ ತೆರಳಿದ ಮಾರ್ಗದಲ್ಲಿ ಹುಡುಕಿ ಹೋದಾಗ ಶವ ಪತ್ತೆಯಾಗಿದೆ.

ರಾತ್ರಿ ವೇಳೆ ರಸ್ತೆಯಲ್ಲಿ ಯಾರೂ ಓಡಾಡದೆ ಅದ್ದರಿಂದ ಸಮಯಕ್ಕೆ ಸರಿಯಾಗಿ ಆಸ್ಪತ್ರೆಗೆ ದಾಖಲಿಸದೆ ಮೃತಪಟ್ಟಿದ್ದಾನೆ ಎನ್ನಲಾಗಿದೆ.

## ಬೋಂಡಿ ಬೀಚ್ ಘಟನೆ: ಗುಂಡಿನ ದಾಳಿ ಆರೋಪಿ ವಿರುದ್ಧ 59 ಪ್ರಕರಣ

• ಪ್ರಜೋದಯ ವರದಿ

**ಸಿಡ್ನಿ:** ಇಲ್ಲಿನ ಬೋಂಡಿ ಬೀಚ್‌ನಲ್ಲಿ ನಡೆದ ಗುಂಡಿನ ದಾಳಿ ಪ್ರಕರಣದಲ್ಲಿ, ಶಂಕಿತ ಆರೋಪಿ ವಿರುದ್ಧ 15 ಕೊಲೆ ಪ್ರಕರಣ ಸೇರಿ ಒಟ್ಟು 59 ಪ್ರಕರಣಗಳನ್ನು ದಾಖಲಿಸಲಾಗಿದೆ.

ಬೀಚ್‌ನಲ್ಲಿ ಡಿ.14ರಂದು ಹನುಕ್ಕಾ ಯಹೂದಿ ಹಬ್ಬದ ಪ್ರಾರಂಭೋತ್ಸವಕ್ಕಾಗಿ ಸೇರಿದ್ದ ಅಪಾರ ಸಂಖ್ಯೆಯ ಜನರ ಮೇಲೆ ಆರೋಪಿಗಳಾದ ಸಾಜಿದ್ ಅಕ್ರಂ



(50) ಮತ್ತು ನವೀದ್ ಅಕ್ರಂ (24) ಮನಬಂದಂತೆ ಗುಂಡಿನ ದಾಳಿ ನಡೆಸಿದ್ದರು. ಸಾಜಿದ್‌ನನ್ನು ಪೊಲೀಸರು ಸ್ಥಳದಲ್ಲೇ ಗುಂಡಿಕ್ಕಿ ಹತ್ಯೆ ಮಾಡಿದ್ದರು. ಒಟ್ಟು 16 ಮಂದಿ ಘಟನೆಯಲ್ಲಿ ಮೃತಪಟ್ಟಿದ್ದರು.

## ಸಕಲೇಶಪುರದಲ್ಲಿ ಹೆಚ್.ಡಿ.ಕುಮಾರಸ್ವಾಮಿ - ಹೆಚ್.ಡಿ. ರೇವಣ್ಣ ಜನ್ಮ ದಿನಾಚರಣೆ



• ಪ್ರಜೋದಯ ವರದಿ

**ಸಕಲೇಶಪುರ:** ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಹಾಗು ಮಾಜಿ ಸಚಿವ ಹೆಚ್.ಡಿ. ರೇವಣ್ಣ ಅವರ ಜನ್ಮ ದಿನವನ್ನು ಜೆಡಿಎಸ್ ಮುಖಂಡರು ಹಾಗು ಕಾರ್ಯಕರ್ತರು ಬುಧವಾರ ಸಂಭ್ರಮದಿಂದ ಆಚರಿಸಿದರು.

ಜನ್ಮದಿನದ ಅಂಗವಾಗಿ ಪಟ್ಟಣದ ಸಕಲೇಶ್ವರಸ್ವಾಮಿ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸ ಲಾಯಿತು. ಮುಖಂಡ ಬೆಕ್ಕನಹಳ್ಳಿ ನಾಗರಾಜ್ ಅವರು ಮಾತನಾಡಿ, ಹೆಚ್.ಡಿ. ಕುಮಾರಸ್ವಾಮಿ ಅವರು ಎರಡು ಬಾರಿ ರಾಜ್ಯದ ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿ ರೈತಪರ ಹಲವಾರು ಯೋಜನೆಗಳನ್ನು ಜಾರಿಗೆ ತಂದು ಜನರ ನಾಯಕನಾಗಿ ಗುರುತಿಸಿಕೊಂಡಿದ್ದಾರೆಂದು ಹೇಳಿದರು.

ಕೇಂದ್ರ ಸರ್ಕಾರದಲ್ಲಿಯೂ ಸಚಿವರಾಗಿ ತಮ್ಮ ಖಾತೆಯನ್ನು ದಕ್ಷತೆಯಿಂದ ನಿರ್ವಹಿಸಿ ಹಲವು ಉತ್ತಮ ಯೋಜನೆಗಳ ಮೂಲಕ ದೇಶದಾದ್ಯಂತ ಅಪಾರ ಅಭಿಮಾನಿಗಳನ್ನು ಸಂಪಾದಿಸಿದ್ದಾರೆಂದು ಹೇಳಿದರು.

ಪುರಸಭಾ ಮಾಜಿ ಅಧ್ಯಕ್ಷೆ ಜ್ಯೋತಿ ರಾಜಕುಮಾರ್,ವಲಳಹಳ್ಳಿ ಪ್ರಸಾದ್, ಭಾಸ್ಕರ್, ಪ್ರಜ್ವಲ್ ಕರಗೂರು, ರಮೇಶ್ ಇತರರಿದ್ದರು.

## ವಿಧಾನಸಭೆಯಲ್ಲಿ ಗೃಹಲಕ್ಷ್ಮಿ ಕೋಲಾಹಲ

» ಮೊದಲನೇ ಪುಟದಿಂದ

**ಸಚಿವರ ಸ್ಪಷ್ಟನೆ**

ಗೃಹಲಕ್ಷ್ಮಿ ಯೋಜನೆ ಹಣದ ವಿಚಾರವಾಗಿ ವಿಧಾನಸಭೆ ಅಧಿವೇಶನದಲ್ಲಿ ತಪ್ಪು ಮಾಹಿತಿ ನೀಡಿ ವಿರೋಧ ಪಕ್ಷಗಳ ತೀವ್ರ ಟೀಕೆ,ವಿರೋಧಕ್ಕೆ ಗುರಿಯಾಗಿರುವ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಸದನದಲ್ಲಿ ಸ್ಪಷ್ಟನೆ ನೀಡಿದರು. ಗೃಹಲಕ್ಷ್ಮಿ ಯೋಜನೆಯ ಎರಡು ತಿಂಗಳ ಹಣ ಪಾವತಿಯಲ್ಲಿ ವಿಳಂಬವಾಗಿರುವುದನ್ನು ಒಪ್ಪಿಕೊಂಡ ಅವರು, ತನಗೆ ಜವಾಬ್ದಾರಿಯ ಅರಿವಿದ್ದು, ಹಣಕಾಸು ಸಚಿವರೂ ಆಗಿರುವ ಮುಖ್ಯ ಮಂತ್ರಿ ಸಿದ್ದರಾಮಯ್ಯ ಅವ ರೊಂದಿಗೆ ಚರ್ಚಿಸಿ ಸಮಸ್ಯೆ ಬಗೆಹರಿಸುವು ದಾಗಿ ಭರವಸೆ ನೀಡಿದರು.

ಮುಖ್ಯಮಂತ್ರಿಗಳು ಈಗಾಗಲೇ ಸದನದಲ್ಲಿ ಈ ವಿಷಯವನ್ನು ಆದಷ್ಟು ಶೀಘ್ರದಲ್ಲಿ ಪರಿಹರಿಸುವುದಾಗಿ ಹೇಳಿದ್ದಾರೆ. ಹಣವನ್ನು ಬೇರೆ ಕಡೆಗೆ ವರ್ಗಾಯಿಸಲಾಗಿಲ್ಲ ಅಥವಾ ಯಾವುದೇ ದುರುಪ ಯೋಗವಾ ಗಿಲ್ಲವೆಂದು ಸ್ಪಷ್ಟಪಡಿಸಿದರು. ಎರಡು ತಿಂಗಳ ಹಣ ಪಾವತಿಯಲ್ಲಿ ವ್ಯತ್ಯಯವಾಗಿರುವುದು ಪರಿಶೀಲನೆ ವೇಳೆ ಬೆಳಕಿಗೆ ಬಂದಿದ್ದು, ಮುಂದಿನ ದಿನಗಳಲ್ಲಿ ಅದನ್ನು ಸರಿಪಡಿಸುವುದಾಗಿ ಅವರು ತಿಳಿಸಿದರು. ತಮ್ಮ ಮಾತಿನಿಂದ ಯಾರಿಗಾದರೂ ನೋವಾಗಿದ್ದರೆ ವಿಷಾದ ವ್ಯಕ್ತಪಡಿಸುವುದಾಗಿ ಹೇಳಿದರು.

**ಹೆಬ್ಬಾಳ್ಕರ್ ಬೆನ್ನಿಗೆ ನಿಂತ ಡಿ.ಕೆ.ಶಿ.**

ಇದೇ ವೇಳೆ ಹೆಬ್ಬಾಳ್ಕರ್ ಅವರ ರಕ್ಷಣೆಗೆ ಬಂದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಕೇಂದ್ರ ಬಜೆಟ್‌ನಲ್ಲಿ ಸುಳ್ಳು ಹೇಳಿ ದ್ದಕ್ಕಾಗಿ ಬಿಜೆಪಿ ಕ್ಷಮೆಯಾಚಿಸಬೇಕೆಂದು ಹೇಳಿದರು. ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಬಜೆಟ್‌ನಲ್ಲಿ ಭದ್ರಾ ಮೇಲ್ದಂಡೆ ನೀರಾವರಿ ಯೋಜನೆಗೆ 5,300 ಕೋ. ರೂ.ಗಳನ್ನು ಘೋಷಿಸಿದ್ದರೂ, ಕರ್ನಾಟಕಕ್ಕೆ ಹಣವನ್ನು ನೀಡಲಾಗಿಲ್ಲ. ನೀವು ಅದನ್ನೂ ಪ್ರಶ್ನಿಸಬೇಕೆಂದು ಒತ್ತಿ ಹೇಳಿದರು.

ಇದಕ್ಕೆ, ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಮಾತನಾಡಿ, ಬಿಜೆಪಿ ಸದಸ್ಯರು ಮಾತ್ರವಲ್ಲದೆ ಹಣಕ್ಕಾಗಿ ಕಾತರದಿಂದ ಕಾಯುತ್ತಿದ್ದ 1.26 ಕೋಟಿ ಫಲಾನುಭವಿಗಳಿಗೂ ನೋವಾಗಿದೆ ಎಂದು ಈ ವಿಷಯವನ್ನು ಎತ್ತಲಾಗಿದೆ. ಸುಳ್ಳನ್ನು ಸದನದ ದಾಖಲೆಗಳಿಂದ ತೆಗೆದು ಹಾಕಬೇಕೆಂದು ಒತ್ತಾಯಿಸಿ, ಬಾಕಿ ಹಣವನ್ನು ಫಲಾನುಭವಿಗಳಿಗೆ ಯಾವಾಗ ಪಾವತಿಸಲಾಗುವುದೆಂಬ ದಿನಾಂಕವನ್ನು ಘೋಷಿಸಬೇಕೆಂದು ಅವರು ಒತ್ತಾಯಿಸಿದರು.

ಈ ವೇಳೆ ಅರವಿಂದ ಬೆಲ್ಲದ್ ಸೇರಿ ಪ್ರತಿಪಕ್ಷದ ನಾಯಕರು ಕ್ಷಮೆಗೆ ಆಗ್ರಹಿಸಿದರು. ಇದೇ ವೇಳೆ ಸದನದಲ್ಲಿ ಗದ್ದಲದ ವಾತಾವರಣ ಸೃಷ್ಟಿಯಾಯಿತು.

## 2026ರ ಅಂತ್ಯಕ್ಕೆ ಎಐ ಆಧಾರಿತ ಡಿಜಿಟಲ್ ಟೋಲ್: ಗಡ್ಕರಿ

• ಪ್ರಜೋದಯ ವರದಿ



**ನವದೆಹಲಿ:** ದೇಶದಾದ್ಯಂತ ಬಹು ಪಥ ಮುಕ್ತ ಹರಿವು (ಎಂಎಲ್‌ಎಫ್‌ಎಫ್) ಟೋಲ್ ಮತ್ತು ಕೃತಕ ಬುದ್ಧಿಮತ್ತೆ (ಎಐ) ತಂತ್ರಜ್ಞಾನ ಆಧಾರಿತ ಹೆದ್ದಾರಿ ನಿರ್ವಹಣೆ ವ್ಯವಸ್ಥೆಯು 2026ರ ಅಂತ್ಯದ ಒಳಗೆ ಪೂರ್ಣಗೊಳ್ಳಲಿದೆ ಎಂದು ಕೇಂದ್ರ ಸಚಿವ ನಿತಿನ್ ಗಡ್ಕರಿ ಅವರು ತಿಳಿಸಿದರು.

ಈ ಯೋಜನೆ ಮತ್ತು ತಂತ್ರಜ್ಞಾನದ ಅನುಷ್ಠಾನದ ನಂತರ ಟೋಲ್ ಪ್ಲಾಜಾ ಗಳಲ್ಲಿ ಪ್ರಯಾಣಿಕರು ಕಾಯುವುದು ತಪ್ಪಲಿದೆ ಎಂದು ರಾಜ್ಯಸಭೆಯಲ್ಲಿ ಬುಧವಾರ ತಿಳಿಸಿದರು.

ಪ್ರಶ್ನೋತ್ತರ ಅವಧಿ ವೇಳೆ ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಿದ ಅವರು, ನೂತನ ತಂತ್ರಜ್ಞಾನವು ಕೃತಕ ಬುದ್ಧಿಮತ್ತೆ ಆಧಾರಿತವಾಗಿರಲಿದೆ. ಅದರಿಂದ ಪ್ರಯಾ ಣಿಕರ ಸಮಯ ಮತ್ತು 1,500 ಕೋಟಿ ಮೌಲ್ಯದ ಇಂಧನವು ಉಳಿತಾಯವಾಗಲಿದೆ. ಅದರಿಂದ ಸರ್ಕಾರದ ಬೊಕ್ಕಸಕ್ಕೆ 6,000 ಕೋಟಿ ಹೆಚ್ಚುವರಿ ವರಮಾನ ಬರಲಿದೆ ಎಂದು ತಿಳಿಸಿದರು. 2026ರ ಅಂತ್ಯದೊಳಗೆ ಈ ಯೋಜನೆ ಯನ್ನು ಅನುಷ್ಠಾನಕ್ಕೆ ತರುವುದು ನಿಶ್ಚಿತ. ಆ ಬಳಿಕ ಪ್ರಯಾಣಿಕರು ಟೋಲ್ ಪ್ಲಾಜಾ ಗಳಲ್ಲಿ ಕಾದು ನಿಲ್ಲಬೇಕಾದ ಅಗತ್ಯವೇ ಇರುವುದಿಲ್ಲ ಎಂದರು.

## ಬೀರುವಿನಲ್ಲಿಟ್ಟಿದ್ದ ಚಿನ್ನಾಭರಣ ಕಳವು

• ಪ್ರಜೋದಯ ವರದಿ

**ಅರಕಲಗೂಡು:** ಹಾಡ ಹಗಲೇ ಮನೆ ಬೀಗ ಮುರಿದು ಒಳನುಗ್ಗಿರುವ ಕಳ್ಳರು ಬೀರುವಿನಲ್ಲಿ ಟ್ಟಿದ್ದ 1.46 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಕದ್ದಿ ರುವ ಘಟನೆ ತಾಲ್ಲೂಕಿನ ಗಂಗೂರು ಕೊಪ್ಪಲು ಗ್ರಾಮದಲ್ಲಿ ನಡೆದಿದೆ.

ಗ್ರಾಮದ ಶ್ರೀನಿವಾಸ್ ಅವರು ಡಿ.14ರ ಬೆಳಿಗ್ಗೆ 9 ಗಂಟೆಗೆ ಮನೆಗೆ ಬೀಗ ಹಾಕಿ ಪತ್ನಿ ಜೊತೆಗೆ ರಾವಂದೂರು ಗ್ರಾಮದಲ್ಲಿ ಏರ್ಪಡಿಸಿದ್ದ ಬೀಗರ ಔತಣಕ್ಕೆ ತೆರಳಿದ್ದರು. ಸಂಜೆ 5 ಗಂಟೆಗೆ ಮನೆಗೆ ಬಂದಾಗ ಕಳ್ಳತನದ ವಿಷಯ ಗೊತ್ತಾಗಿದೆ. ಚಿನ್ನಾಭರಣವಿದ್ದ ಬೀರುವನ್ನು ಪರಿಶೀಲಿಸಿದಾಗ 3 ಗ್ರಾಂ ತೂಕದ 5 ಜೊತೆ ಚಿನ್ನದ ಓಲೆ, 25 ಗ್ರಾಂ ಚಿನ್ನದ ನೆಕ್ಲೇಸ್, 1 ಗ್ರಾಂ ತೂಕದ 2 ಚಿನ್ನದ ಕಾಸು, 1 ಗ್ರಾಂ ತೂಕದ 2 ಚಿನ್ನದ ಚೈನ್ ಪೀಸ್, 5 ಗ್ರಾಂ ತೂಕದ ಚಿನ್ನದ ಕರಿಮಣಿ ಸರ, 5 ಗ್ರಾಂ ತೂಕದ ಮಾಟಿ, 5 ಗ್ರಾಂ ತೂಕದ 2 ಬೆಳ್ಳಿ ಕೈ ಉಂಗುರ, 1 ಗ್ರಾಂ ತೂಕದ ಚಿನ್ನದ ಮೂಗುಬೊಟ್ಟು ಕಳುವಾಗಿದೆ.

### ಚಿನ್ನಾಭರಣ ಕಳವು

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ರಾತ್ರಿ ವೇಳೆ ಮನೆ ಬಾಗಿಲು ಮುರಿದು ಒಳನುಗ್ಗಿರುವ ಕಳ್ಳರು ನಗದು ಸೇರಿ 1.38 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಕದ್ದಿರುವ ಘಟನೆ ನಡೆದಿದೆ.

ನುಗ್ಗೇಹಳ್ಳಿ ಹೋಬಳಿ ಬಾಣನಕೆರೆ ಗ್ರಾಮದ ನಾಗರಾಜು ಮನೆಯಲ್ಲಿ ಡಿ.15ರಂದು ಕಳ್ಳತನ ನಡೆದಿದೆ. ಮಧ್ಯ ರಾತ್ರಿ 2 ಗಂಟೆ ಸಮಯದಲ್ಲಿ ಯಾವುದೋ ಸಪ್ಪಳ ಕೇಳಿ ನಾಗರಾಜು ಅವರ ತಂದೆ ಶಿವೇಗೌಡ ಎದ್ದಿದ್ದಾರೆ. ಅಷ್ಟರಲ್ಲಿ ಕಳ್ಳರು ಅಲ್ಲಿಂದ ಪರಾರಿಯಾಗಿದ್ದಾರೆ. ಬೀರುವಿನಲ್ಲಿಟ್ಟಿದ್ದ 30 ಗ್ರಾಂ ತೂಕದ ಚಿನ್ನದ ಮಾಂಗಲ್ಯ ಸರ, 21 ಗ್ರಾಂ ತೂಕದ ಚಿನ್ನದ 4ಉಂಗುರ, 16 ಗ್ರಾಂ ತೂಕದ ಚಿನ್ನದ ಕೊರಳ ಚೈನು, 7ಗ್ರಾಂ ತೂಕದ ಚಿನ್ನದ ಓಲೆ ಹಾಗು 6 ಸಾವಿರ ರೂ. ನಗದು ಕದ್ದಿ ದ್ದಾರೆ.

**CHANGE OF NAME**

I. MOHAMMED SUHAIL S/o MOHAMMED MUNAWAR aged about 53 years Residing at ward no 28, Raja Rajeshwari match factory compound, Hassan.
I Have changed My name MOHAMED SUHAIL S/o MOHAMED MUNAWAR (old name), to MOHAMMED SUHAIL S/o MOHAMMED MUNAWAR (new name). vide affidavit dated 17-12-2025 sworn before Notary Public D.S Jagadamba Hereafter all my transaction will be held in the name of MOHAMMED SUHAIL S/o MOHAMMED MUNAWAR only

ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019